ಸಂಪುಟ : 9 ಸಂಚಿಕೆ 29 ಪುಟ : 4 ಬೆಲೆ : 3.00 ಬುಧವಾರ ಫೆಬ್ರವರಿ 28, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 29 Pages : 4 Price : 3.00 Wednesday February 28 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ನೀರು ಪೂರೈಕೆಯಲ್ಲಿ ವ್ಯತ್ಯಯ


■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೆನೆಂದರೆ, ಸಗಟು ನೀರು ಸರಬರಾಜು ಮಾಡುವ ಹಮ್ಮಿಗಿ ಜಾಕ್‌ವೆಲ್‌ದಿಂದ ಬರದೂರ ಗ್ರಾಮದವರೆಗೂ ಹಾಗೂ ಚಿಕ್ಕಟ್ಟಿ ಶಾಲೆ ಎದುರಿನ ಓಊಂಖ ಹೆದ್ದಾರಿಯ ಪಕ್ಕದಲ್ಲಿ ಹಲವು ಭಾಗಗಳ ನೀರು ಪೂರೈಕೆಯ ಮುಖ್ಯ ಕೊಳವೆ ಮಾರ್ಗಗಳಲ್ಲಿ ದುರಸ್ತಿ ಇರುವುದರಿಂದ ಫೆಬ್ರವರಿ 28 ರಂದು ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ದುರಸ್ತಿ ನಂತರದಲ್ಲಿ ನೀರು ಪೂರೈಕೆ ಯಥಾವತ್ತಾಗಿ ಮಾಡಲಾಗುವುದು. ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಡಳಿತದಿಂದ ಕಟ್ಟುನಿಟ್ಟಿನ ಸೂಚನೆ

## ನಿಷೇಧಿತ ಗಾಳಿಪಟ ಮಾಂಜಾ ದಾರ ಬಳಕೆ ಬೇಡ



**ನಿಷೇಧ ಆದೇಶ ಹೊರಡಿಸಿದ್ದ ಸರ್ಕಾರ**

ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿಯ ತೀರ್ಪಿನಂತೆ ರಾಜ್ಯ ಸರಕಾರ 2017 ರಲ್ಲಿ ಮಾಂಜಾ ದಾರದ ತಯಾರಿಕೆ, ಬಳಕೆ, ಮಾರಾಟವನ್ನು ನಿಷೇಧಿಸಿ ಗೆಜೆಟ್ ಅಧಿಸೂಚನೆ ಹೊರಡಿಸಿದೆ.

■ ವಿಜಯಸಾಕ್ಷಿ ಸುದ್ದಿ, ಗದಗ

ಗಾಳಿಪಟ ಹಾರಿಸಲು ಬಳಕೆ ಮಾಡುವ ಮಾಂಜಾ ದಾರವನ್ನು (Manja Thread) ನಿಷೇಧಿಸಲಾಗಿದೆ. ಜಿಲ್ಲಾದ್ಯಂತ ಅಪಾಯಕಾರಿ ಮಾಂಜಾ ದಾರ ಮಾರಾಟ, ಬಳಕೆ ಮಾಡಬಾರದು. ಫ್ಯಾನ್ಸಿ ಸ್ಟೋರ್‌ಗಳು, ಸಣ್ಣಪುಟ್ಟ ಗುಡಂಗಡಿಗಳಲ್ಲಿ ಈ ದಾರ ಮಾರಾಟ ಮಾಡುವುದು ಬೇಡ.

ಗಾಳಿಪಟ ಹಾರಾಟಕ್ಕೆ ಬಳಕೆ ಮಾಡುವ ಮಾಂಜಾ ದಾರವು ಪ್ರಾಣಿ-ಪಕ್ಷಿಗಳು ಮಾತ್ರವಲ್ಲದೆ ಮನುಷ್ಯರ ಪ್ರಾಣಕ್ಕೂ ಕಂಟಕವಾಗಿವೆ. ನಗರದ ರಸ್ತೆಯಲ್ಲಿ ಹರಿತವಾದ ಗಾಳಿಪಟ ದಾರದಿಂದ ಬೈಕ್ ಸವಾರರು, ಪಾದಚಾರಿಗಳ ಕಾಲು, ಕೈಗೆ ಗಾಯವಾಗುತ್ತಿವೆ. ಮಾಂಜಾ ದಾರ ಮಾರಾಟ, ಬಳಕೆ ಮಾಡುವುದು ಕಂಡು ಬಂದಲ್ಲಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯಿಂದ ಕಠಿಣ ಕಾನೂನು ಕ್ರಮ ಜರುಗಿಸಲಾಗುವು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ. ಎಲ್. ಅವರು ತಿಳಿಸಿದ್ದಾರೆ.

## ಸಾಹೇಬಶಾವಲಿ ದರ್ಗಾದ ಉರುಸು ಕಾರ್ಯಕ್ರಮಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ರೈಲ್ವೆ ಸ್ಟೇಷನ್ ಹತ್ತಿರದಲ್ಲಿರುವ ಸಾಹೇಬಶಾವಲಿ ದರ್ಗಾದ ಉರುಸು ಕಾರ್ಯಕ್ರಮದ ನಿಮಿತ್ತ ಫೆ.29ರಂದು ಗಂಧ, ಸಂಜೆ 6.30ಕ್ಕೆ ದರ್ಗಾದಿಂದ ಹೊರಡುವ ಕಾರ್ಯಕ್ರಮ ದಿ. ವಾಯ್.ವಾಯ್. ಜಾಧವ ಇವರ ಸ್ಮರಣಾರ್ಥ ಇವರ ಮಕ್ಕಳಿಂದ ನೆರವೇರುವುದು.

ಮಾರ್ಚ್ 1ರಂದು ಅನ್ನ ಸಂತರ್ಪಣೆ ಮಧ್ಯಾಹ್ನ 12.30ಕ್ಕೆ ಹಾಗೂ ಸಂಜೆ 7.30ರಿಂದ 8.30ರವರೆಗೆ ಪ್ರಸಾದ ಇರುವುದು. ರಾತ್ರಿ 9 ಗಂಟೆಗೆ ಫರ್ವಿನ್ ಸುಲ್ತಾನ ಕೊಲ್ಹಾಪುರ ಮತ್ತು ತಯ್ಯಬ್ ಸಬ್ರಿ ದೆಹಲಿ ಇವರ ಕವ್ವಾಲಿ ಕಾರ್ಯಕ್ರಮವನ್ನು ಸಚಿವ ಡಾ. ಎಚ್.ಕೆ. ಪಾಟೀಲ, ನಗರಸಭಾಧ್ಯಕ್ಷೆ ಉಷಾ ಮಹೇಶ ದಾಸರ ಉದ್ಘಾಟಿಸುವರು. ಕಮಿಟಿ ಅಧ್ಯಕ್ಷ ಬಸವರಾಜ ಎಸ್.ತಿಲ್ಲಿಹಾಳ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ, ರೇಲ್ವೆ ಇಲಾಖೆಯ ಹನುಮಂತ ವೀರಾಪೂರ ಆಗಮಿಸುವರು. ಅತಿಥಿಗಳಾಗಿ ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷ ಪೀರಸಾಬ ಕೌತಾಳ, ಈದ್ಗಾ ಕಮಿಟಿ ಅಧ್ಯಕ್ಷ ಜನಾಬ ಎಂ.ಆರ್. ಅಣ್ಣಿಗೇರಿ, ಗದಗ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಗದಗ ಶ್ರೀಪತಿ ಉಡುಪಿ, ಪ್ರಮುಖರಾದ ವಿಜಯಲಕ್ಷ್ಮೀ ದಿಂಡೂರ, ಮುತ್ತು ಮುಶಿಗೇರಿ, ಇಮ್ತಿಯಾಜ್ ಶಿರಹಟ್ಟಿ, ಸುರೇಶ ಗರಗ, ಶ್ರೀನಿವಾಸ ಹುಯಿಲಗೋಳ, ಮಂಜು ಪೂಜಾರ, ಮಾಧವ ಗಣಾಚಾರಿ, ಬಾಬು ತಿಪ್ಪಯ್ಯ, ಜನಾಬ ಎಲ್.ಎಚ್., ಜನಾಬ ಜಾಫರ್, ವಾಯ್.ಡಿ. ಕೋಟ್ನಿಕಲ್, ಜನಾಬ ನೂರಅಹ್ಮದ, ಪ್ರಭುಗೌಡ ಕಡಪಟ್ಟಿ, ಜನಾಬ ಅಹ್ಮದ ಕಬ್ಬೀರ ರೋಟೀವಾಲ್ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

### ರಾಷ್ಟ್ರೀಯ ಪಲ್ಸ್ ಪೋಲಿಯೊ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ಪೋಲಿಯೊ ಕಾರ್ಯಕ್ರಮದ ಜಾಗೃತಿ ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಮಕ್ಕಳಿಗೆ ಮಾರ್ಚ್ 3ರಂದು ಬೂತ್ ಮಟ್ಟದಲ್ಲಿ ಪೋಲಿಯೊ ಲಸಿಕೆ ಹಾಕಲಾಗುವುದು ಹಾಗೂ ಮಾರ್ಚ್ 4ರಿಂದ 6ರವರೆಗೆ ಮೂರು ದಿನಗಳ ಕಾಲ ಮನೆ-ಮನೆಗೆ ಭೇಟಿ ನೀಡಿ ಪೋಲಿಯೊ ಲಸಿಕೆ ಹಾಕಲಾಗುತ್ತಿದ್ದು, ಲಸಿಕೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಸೋಮವಾರ ಜರುಗಿದ 'ರಾಷ್ಟ್ರೀಯ ಪಲ್ಸ್ ಪೋಲಿಯೊ' ಅನುಷ್ಠಾನ ಕುರಿತ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಾಲಾ ಮಕ್ಕಳಿಗೆ ಪಲ್ಸ್ ಪೋಲಿಯೊ ಕಾರ್ಯಕ್ರಮದ ಕುರಿತು ಪ್ರಭಾತ್‌ಪೇರಿ ಕೈಗೊಳ್ಳಬೇಕು. ಪಲ್ಸ್ ಪೋಲಿಯೊ ಬೂತ್‌ಗಳಿಗಳಿರುವ ಅಂಗನವಾಡಿ ಕೇಂದ್ರಗಳನ್ನು ಪೋಲಿಯೊ ಬ್ಯಾನರ್‌ಗಳಿಂದ ಸಿಂಗರಿಸಿ ಪಲ್ಸ್ ಪೋಲಿಯೊ 4 ದಿನದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಕಟ್ಟಡ ನಿರ್ಮಾಣಕ್ಕೆ ಬಂದ ಕಾರ್ಮಿಕರಿಗೆ ಪೋಲಿಯೊ ಕಾರ್ಯಕ್ರಮದ ಜಾಗೃತಿ ಮೂಡಿಸಬೇಕು ಎಂದರಲ್ಲದೆ, ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಅವಶ್ಯವಿರುವ ಐಸ್‌ಪ್ಯಾಕ್ ತಯಾರಿಸಲು ಮೂರು ದಿನಗಳ ಮೊದಲು ನಿರಂತರ ವಿದ್ಯುತ್ ಸರಬರಾಜು ಇರುವಂತೆ ನೋಡಿಕೊಳ್ಳಬೇಕು ಎಂದರು.



ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್ ಮಾತನಾಡಿ, ಪಲ್ಸ ಪೋಲಿಯೊ ಕಾರ್ಯಕ್ರಮದ ಈ ಸುತ್ತಿನಲ್ಲಿ 129327 ಮಕ್ಕಳಿಗೆ ಲಸಿಕೆ ಗುರಿ ಹೊಂದಲಾಗಿದೆ. ಮಾರ್ಚ್ 3ರಂದು ಬೂತ್ ಮಟ್ಟದಲ್ಲಿ ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಲಾಗುವುದು. ಮಾರ್ಚ್ 4ರಿಂದ 6ರವರೆಗೆ ಮೂರು ದಿನಗಳವರೆಗೆ ಲಸಿಕಾ ತಂಡದವರು ಮನೆ-ಮನೆಗೆ ಭೇಟಿ ನೀಡಿ ಲಸಿಕಾ ಕೇಂದ್ರಕ್ಕೆ ಬರದೇ ಉಳಿದ ಮಕ್ಕಳನ್ನು ಹುಡುಕಿ, ಅಂತಹ ಮಕ್ಕಳಿಗೆ ಲಸಿಕೆ ನೀಡಿ ಆ ಮನೆಗಳಿಗೆ 'ಪಿ' ಗುರುತನ್ನು ಹಾಕುವರು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಪಲ್ಸ್ ಪೋಲಿಯೊ ಕುರಿತ ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ, ಎಸ್.ಎಂ.ಓ ಡಾ.ಮುಕುಂದ ಗಲಗಲಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ವಿ.ಸಿ.ಕರಿಗೌಡ್ರ, ತಾಲೂಕಾ ವೈದ್ಯಾಧಿಕಾರಿಗಳು, ಜಿಲ್ಲೆಯ ಎಲ್ಲಾ ಅನುಷ್ಠಾನಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಗ್ರಾಮೀಣ ಭಾಗದಲ್ಲಿ 470 ಲಸಿಕಾ ಕೇಂದ್ರಗಳನ್ನು ಹಾಗೂ ನಗರ ಪ್ರದೇಶಗಳಲ್ಲಿ 235 ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದೆ. ಈ ಕೆಲಸಕ್ಕೆ ಒಟ್ಟು 1410 ಜನ ಸಿಬ್ಬಂದಿಯವರನ್ನು ಲಸಿಕೆ ಹಾಕುವ ಕೆಲಸಕ್ಕೆ ಒಟ್ಟು 705 ತಂಡಗಳಲ್ಲಿ ನಿಯೋಜನೆ ಮಾಡಲಾಗಿದೆ. ಕಾರ್ಯಕ್ರಮದ ಸಮರ್ಪಕ ಅನುಷ್ಠಾನಕ್ಕಾಗಿ ಮೇಲ್ವಿಚಾರಣೆ ಮಾಡಲು 146 ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಅದರಂತೆ 30 ಟ್ರಾನ್ಸಿಟ್ ತಂಡಗಳು ಹಾಗೂ 7 ಸಂಚಾರಿ ತಂಡಗಳ ಮೂಲಕ ಪೋಲಿಯೋ ಹನಿ ಹಾಕುವ ವ್ಯವಸ್ಥೆ ಮಾಡಲಾಗಿದೆ ಎಂದು ಡಾ. ಮೀನಾಕ್ಷಿ ಕೆ.ಎಸ್ ಸಭೆಗೆ ತಿಳಿಸಿದರು.

## ರೋಣಕ್ಕೂ ಬಂತು 'ಥರ್ಡ್ ಐ'



■ ವಿಜಯಸಾಕ್ಷಿ ಸುದ್ದಿ, ರೋಣ

ವಾಹನ ಸವಾರರು ಇನ್ನುಮುಂದೆ ರೋಣ ಪಟ್ಟಣದಲ್ಲಿ ಹೆಲ್ಮೆಟ್ ಹಾಗೂ ಸೀಟ್ ಬೆಲ್ಟ್ ಇಲ್ಲದೆ ತಮ್ಮ ವಾಹನಗಳನ್ನು ಚಲಾಯಿಸುವಂತಿಲ್ಲ. ಕಾರಣ, ರೋಣಕ್ಕೂ ಸಹ ಥರ್ಡ್ ಐ ಅಳವಡಿಸಲಾಗಿದ್ದು, ಮಾರ್ಚ್ 1ರಿಂದ ಕಾರ್ಯ ಆರಂಭಿಸಲಿದೆ.

ಈಗಾಗಲೇ ರೋಣ ಪಟ್ಟಣದ ಮುಲ್ಲಾನಭಾವಿ ವೃತ್ತದ ಬಳಿ ಥರ್ಡ್ ಐ ಕ್ಯಾಮರಾವನ್ನು ಅಳವಡಿಸಲಾಗಿದ್ದು, ಪೊಲೀಸ್ ಇಲಾಖೆಯೂ ಸಹ ವಾಹನ ಸವಾರರಲ್ಲಿ ಜಾಗೃತಿ ಮೂಡಿಸುತ್ತಿದೆ.

ಎಲ್ಲೆಂದರಲ್ಲಿ ಬೇಕಾಬಿಟ್ಟಿಯಾಗಿ ವಾಹನಗಳನ್ನು ನಿಲ್ಲಿಸುವುದು, ಸೀಟ್ ಬೆಲ್ಟ್ ಇಲ್ಲದೆ ವಾಹನ ಚಲಾಯಿಸುವುದು, ಹೆಲ್ಮೆಟ್ ಇಲ್ಲದೆ ಹಾಗೂ ಬೈಕ್‌ಗಳಲ್ಲಿ ಬಿಬ್ಬರಿಗಿಂತ ಹೆಚ್ಚು ಜನ ಪ್ರಯಾಣಿಸುವುದು ಇತ್ಯಾದಿ ಕಾನೂನು ಉಲ್ಲಂಘನೆಗಳ ಬಗ್ಗೆ ಥರ್ಡ್ ಐನಿಂದ ಆಗಿಂದಾಗ್ಗೆ ಮಾಹಿತಿ ಸಂಗ್ರಹವಾಗಲಿದೆ. ಟ್ರಾಫಿಕ್ ನಿಯಮಗಳನ್ನು ಪಾಲನೆ ಮಾಡದಿರುವವರಿಗೆ ಇದೊಂದು ಕಣ್ಗಾವಲು. ಹೀಗಾಗಿ ಸಾರ್ವಜನಿಕರು ನಿಯಮಗಳನ್ನು ಪಾಲಿಸುವ ಮೂಲಕ ಸಹಕರಿಸಬೇಕು. ಇಲ್ಲದಿದ್ದರೆ ದಂಡ ಕಟ್ಟುವುದು ಅನಿವಾರ್ಯವಾಗುತ್ತದೆ ಎಂದು ಸಿಪಿಐ ಎಸ್.ಎಸ್. ಬಿಳಗಿ ಹಾಗೂ ಪಿಎಸ್‌ಐ ಎಲ್.ಕೆ. ಜೂಲಕಟ್ಟಿ ಮಾಹಿತಿ ನೀಡಿದ್ದಾರೆ.

### ಕೆಎಸ್‌ಆರ್‌ಟಿಸಿಯಿಂದ ಚಿಲ್ಲರೆ ಸಮಸ್ಯೆ ಪರಿಹಾರ, ನಗದು ರಹಿತ ಪ್ರಯಾಣಕ್ಕಾಗಿ ಹೊಸ ವ್ಯವಸ್ಥೆ

# ಯುಪಿಐ ವಹಿವಾಟು ಪಾಕ್ಷಿಕ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಉತ್ತರ ಕರ್ನಾಟಕ ಭಾಗದ ಸಾರ್ವಜನಿಕ ಪ್ರಯಾಣಿಕರ ಸಂಚಾರ ಜೀವನಾಡಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೇವೆ ಒದಗಿಸುವುದರ ಜೊತೆ-ಗೆ ನಗದು ರಹಿತ ವ್ಯವಹಾರ ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿಯೇ ಮೊದಲ ಬಾರಿಗೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಟಿಕೆಟ್ ವಿತರಣೆಗೆ ಯುಪಿಐ ಮೂಲಕ ಹಣ ಸ್ವೀಕೃತಿ ವ್ಯವಸ್ಥೆಯನ್ನು ಹುಬ್ಬಳ್ಳಿ-ಗ್ರಾಮಾಂತರ ವಿಭಾಗದಲ್ಲಿ ಪ್ರಾಯೋಗಿಕವಾಗಿ ಪ್ರಾರಂಭಿಸಲಾಗಿತ್ತು.

ಚಿಲ್ಲರೆ ಸಮಸ್ಯೆ ಪರಿಹಾರ, ನಗದು ರಹಿತ ಪ್ರಯಾಣ ಹಾಗೂ ಸಮಯದ ಉಳಿತಾಯ ಮುಂತಾದ ಪ್ರಯೋಜನಗಳಿಂದಾಗಿ ಸಾರ್ವಜನಿಕರಿಂದ ಹಾಗೂ ಸಂಸ್ಥೆಯ ಸಿಬ್ಬಂದಿಗಳಿಂದ ನಿರೀಕ್ಷೆಗೂ ಮೀರಿ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಫೆ.3ರಂದು ಗದುಗಿನಲ್ಲಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಸಂಸ್ಥೆಯ ಬಸ್ಸುಗಳಲ್ಲಿ ನಗದು ರಹಿತ ವ್ಯವಸ್ಥೆ ಜಾರಿಗೊಳಿಸುವ ಸಮಾರಂಭದಲ್ಲಿ ಯುಪಿಐ ಯೋಜನೆಗೆ ವಿಧ್ಯುಕ್ತವಾಗಿ ಚಾಲನೆ ನೀಡಿದ್ದಾರೆ.



ಸದರಿ ವ್ಯವಸ್ಥೆಯನ್ನು ಎಲ್ಲ ಘಟಕಗಳಲ್ಲಿ ಅಳವಡಿಸುವ ಕಾರ್ಯ ಫೆ.16ರಂದು ಮುಕ್ತಾಯಗೊಂಡಿದೆ. ಸಂಸ್ಥೆಯ 50 ಘಟಕಗಳ ಸಾರಿಗೆಗಳಲ್ಲಿ ಸದರಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲಾಗಿದೆ. ಇದರಿಂದ ಸಾರ್ವಜನಿಕರು ಮತ್ತು ಚಾಲನಾ ಸಿಬ್ಬಂದಿಗಳ ನಡುವೆ ಚಿಲ್ಲರೆ ಸಮಸ್ಯೆ ಉಂಟಾಗುವುದನ್ನು ತಡೆಯಬಹುದಲ್ಲದೇ ನಗದು ರಹಿತ ವಹಿವಾಟಿಗೆ ಉತ್ತೇಜನ ನೀಡಿದಂತಾಗುತ್ತದೆ.

ಪ್ರಸ್ತುತ ಸಂಸ್ಥೆಯಲ್ಲಿ ಪ್ರತಿದಿನ ಅಂದಾಜು 15 ಸಾವಿರ ವಹಿವಾಟುಗಳಿಂದ ಒಟ್ಟು ಸುಮಾರು 14 ಲಕ್ಷ ರೂ ಆದಾಯ ಸಂಗ್ರಹವಾಗುತ್ತಿದೆ. ಇಲ್ಲಿಯವರೆಗೆ ಒಟ್ಟು 2.59 ಲಕ್ಷ ವಹಿವಾಟುಗಳಿಂದ ಒಟ್ಟು ರೂ.3.79 ಕೋಟಿ ಸಂಗ್ರಹವಾಗಿದೆ. ಸಂಸ್ಥೆಯ ವಾಹನಗಳಲ್ಲಿ ನಗದು ರಹಿತ ಯುಪಿಐ ವಹಿವಾಟುಗಳ ಮೂಲಕ ಟಿಕೆಟ್ ವಿತರಣೆಯನ್ನು ಪ್ರೋತ್ಸಾಹಿಸಲು ಮಾರ್ಚ್ 3ರಿಂದ ಯುಪಿಐ ವಹಿವಾಟು ಪಾಕ್ಷಿಕವನ್ನು ಎಲ್ಲ ವಿಭಾಗ/ಘಟಕಗಳಲ್ಲಿ ಆಚರಿಸಲಾಗುತ್ತಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್. (ಭಾ.ಆ.ಸೇ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿ.ಎಂ. ಮಾಧ್ಯಮ ಸಲಹೆಗಾರ ಪ್ರಭಾಕರಗೆ ಸತ್ಕಾರ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ವಿವಿಧ ಭಾಗದ ಜಿಲ್ಲಾ ಮತ್ತು ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಸರಕಾರದ ಮೇಲೆ ಒತ್ತಡ ತಂದು ಕಾನಿಪ ಸಂಘದ ಸಹಕಾರದೊಂದಿಗೆ ಪತ್ರಕರ್ತರಿಗೆ ನ್ಯಾಯ ಒದಗಿಸಿಕೊಟ್ಟ ಸಿ.ಎಂ. ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಅವರಿಗೆ ಕಾನಿಪ ಕೇಂದ್ರ ಕಚೇರಿ ಕಂದಾಯ ಭವನದಲ್ಲಿ ಸಂಘದಿಂದ ಸತ್ಕರಿಸಿ ಗೌರವಿಸಲಾಯಿತು.

ಅದೇ ರೀತಿ ರಾಜ್ಯದ ವಿವಿಧ ಜಿಲ್ಲೆಯಿಂದ ಆಗಮಿಸಿದ ಜಿಲ್ಲಾ ಕಾನಿಪ ಘಟಕದಿಂದ ಸತ್ಕರಿಸಿಲಾಯಿತು.

ಕಾನಿಪ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರ ಅಧ್ಯಕ್ಷತೆಯಲ್ಲಿ ಬಾಗಲಕೋಟೆ ಜಿಲ್ಲಾ ಕಾನಿಪ ಘಟಕದಿಂದ ರಾಜ್ಯ ಸಮಿತಿ ಸದಸ್ಯ ಮಹೇಶ ಅಂಗಡಿ, ಜಿಲ್ಲಾಧ್ಯಕ್ಷ ಆನಂದ ದಲಬಂಜನ್, ಪ್ರಧಾನ ಕಾರ್ಯದರ್ಶಿ ಶಂಕರ ಕಲ್ಯಾಣಿ ಅವರ ಪರವಾಗಿ ಹಾಯ್ ಮಿಂಚು ಪತ್ರಿಕೆ ಸಂಪಾದಕ ಅಮನ್ ಕೊಡಗಲಿ ಕೆ.ವಿ.ಪ್ರಭಾಕರ ಅವರನ್ನು ಗೌರವಿಸಿ ಸತ್ಕರಿಸಿದರು.

ರಾಜ್ಯ ಉಪಾಧ್ಯಕ್ಷರಾದ ಪುಂಡಲೀಕ ಬಾಳೋಜಿ, ಕುಟ್ಟಪ್ಪ, ರಾಜ್ಯ ಕಾರ್ಯದರ್ಶಿ ಲೋಕೇಶ, ಮತ್ತಿಕೆರೆ ಜಯರಾಮ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಮೃತ ಮಹಿಳೆಯ ನೇತ್ರದಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಮರಣಾನಂತರ ನೇತ್ರದಾನ ಮಾಡುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮುಂದುವರೆಸಿದ್ದು ಸೋಮವಾರ ಗದುಗಿನಲ್ಲಿ ನಿಧನರಾದ ಮಹಿಳೆಯೋರ್ವರ ಕುಟುಂಬದವರ ಮನವೊಲಿಸಿ ನೇತ್ರದಾನಕ್ಕೆ ಕ್ಲಬ್ ಮುಂದಾಯಿತು.

ನಗರದ ನಿವಾಸಿ ಕಸ್ತೂರಿ ಚಿಕ್ಕವೀರಪ್ಪ ಗುಗ್ಗರಿ (68) ಅವರು ಸೋಮವಾರ ನಿಧನರಾಗಿದ್ದು, ಕ್ಲಬ್‌ನ ಪದಾಧಿಕಾರಿಗಳ ಪ್ರೇರಣೆಯಿಂದಾಗಿ ಕುಟುಂಬಸ್ಥರು ನೇತ್ರದಾನಕ್ಕೆ ಮುಂದಾದಾಗ ಹುಬ್ಬಳ್ಳಿಯ ಎಂ.ಎಂ. ಜೋಷಿ ನೇತ್ರಾಲಯವನ್ನು ಸಂಪರ್ಕಿಸಿ ನೇತ್ರದಾನದ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದರು.

ಈ ಸಂದರ್ಭದಲ್ಲಿ ಜೋಷಿ ನೇತ್ರಾಲಯದ ತಜ್ಞರ ತಂಡ, ಕ್ಲಬ್‌ನ ಅಧ್ಯಕ್ಷ ರಮೇಶ ಶಿಗ್ಲಿ, ಕ್ಲಬ್‌ನ ಸದಸ್ಯರಾದ ಅಶ್ವಥ್ ಸುಲಾಖೆ, ನಿತೀಶ್ ಸಾಲಿ ಹಾಗೂ ಗುಗ್ಗರಿ ಕುಟುಂಬದವರು ಉಪಸ್ಥಿತರಿದ್ದರು. ಇದು 13ನೇ ನೇತ್ರದಾನವಾಗಿದೆ.



## ಫೆ 29ರ ಬದಲಾಗಿ ಮಾರ್ಚ್ 2ರಂದು ಗ್ಯಾರಂಟಿ ಸಮಾವೇಶ



■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶವನ್ನು ಫೆ.29ರಂದು ತಾಲೂಕಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಆದರೆ ಕಾರಣಾಂತರಗಳಿಂದ ಸಮಾವೇಶವನ್ನು ಮಾರ್ಚ್ 2ರಂದು ನಡೆಸಲು ಉದ್ದೇಶಿಸಲಾಗಿದೆ ಎಂಬ ಮಾಹಿತಿ ತಿಳಿದುಬಂದಿದೆ.

ಫೆ.29ರಂದು ಸಮಾವೇಶ ನಡೆಸಬೇಕು ಎಂಬ ಉದ್ದೇಶದಿಂದ ಶಾಸಕ ಜಿ.ಎಸ್. ಪಾಟೀಲ ತಾಲೂಕಾ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಹಲವು ಸುತ್ತಿನ ಸಭೆಗಳನ್ನು ನಡೆಸಿದ್ದರು. ಅಲ್ಲದೆ ಸಿದ್ಧತೆ ಕೂಡ ಮಾಡಿಕೊಳ್ಳಲಾಗಿತ್ತು. ತಾಲೂಕಾ ಕ್ರೀಡಾಂಗಣದಲ್ಲಿ ಬೃಹತ್ ಶಾಮಿಯಾನ ಹಾಕಲಾಗಿತ್ತು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದರು.

ಆದರೆ ರಾಜ್ಯ ಸಭೆ ಚುನಾವಣೆ ಜೊತೆಗೆ ಫೆ.29ರಂದು ಬೆಂಗಳೂರು ಸೇರಿದಂತೆ ಹಲವು ಕಡೆಗಳಲ್ಲಿ ಫಲಾನುಭವಿಗಳ ಸಮಾವೇಶ ಆಯೋಜನೆಗೊಂಡಿರುವ ಹಿನ್ನೆಲೆಯಲ್ಲಿ ರೋಣದಲ್ಲಿ ನಡೆಯಬೇಕಿದ್ದ ಸಭೆಯನ್ನು ಮಾರ್ಚ್ 2ರಂದು ತಾಲೂಕಾ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎನ್ನಲಾಗಿದೆ.

ಈ ಬಗ್ಗೆ ರೋಣ ತಹಸೀಲ್ದಾರ ನಾಗರಾಜ.ಕೆ. ಪ್ರತಿಕ್ರಿಯಿಸಿ, ಸರಕಾರದ ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶವನ್ನು ಫೆ.29ರ ಬದಲಾಗಿ ಮಾರ್ಚ್ 2ರಂದು ಈಗ ನಿಗದಿಯಾಗಿರುವ ತಾಲೂಕಾ ಕ್ರೀಡಾಂಗಣದಲ್ಲಿ ನಡೆಸಲಾಗುತ್ತಿದೆ. ಈ ಕುರಿತು ಮಾಧ್ಯಮಗಳಲ್ಲಿ ಪ್ರಕಟನೆಯನ್ನು ನೀಡಲಾಗುವುದು ಎಂದಿದ್ದಾರೆ.

## ಸಂಪಾದಕೀಯ

# ರಾಜ್ಯಸಭೆ ಚುನಾವಣೆ; ಮತ್ತೆ ಮುಖಭಂಗ ಅನುಭವಿಸಿದ ಬಿಜೆಪಿ

ರಾಜ್ಯಸಭೆ ಚುನಾವಣೆ ಮುಕ್ತಾಯವಾಗಿದ್ದು ಬಿಜೆಪಿಯ ಲೆಕ್ಕಾಚಾರ ಮತ್ತೊಮ್ಮೆ ತಲೆಕೆಳಗಾಗಿದೆ. ಜೆಡಿಎಸ್ ಜೊತೆ-ಗೆ ಮೈತ್ರಿ ಮಾಡಿಕೊಂಡರು ಅದರ ಪರಿಣಾಮ ಮಾತ್ರ ಚುನಾವಣೆಯಲ್ಲಿ ಕಾಣುತ್ತಿಲ್ಲ. ಬೆಂಗಳೂರು ಶಿಕ್ಷಕರ ಮತಕ್ಷೇತ್ರದ ಚುನಾವಣೆಯಲ್ಲಿಯೂ ಮೈತ್ರಿ ಅಭ್ಯರ್ಥಿಗೆ ಮುಖಭಂಗವಾಗಿತ್ತು. ರಾಜ್ಯಸಭೆ ಚುನಾವಣೆಯಲ್ಲಿ ಅದು ಮರುಕಳಿಸಿದೆ.

ಸಂಖ್ಯಾಬಲ ಇಲ್ಲದಿದ್ದರೂ ಜೆಡಿಎಸ್ ತನ್ನ ಅಭ್ಯರ್ಥಿಯನ್ನ ಕಣಕ್ಕೆ ಇಳಿಸಿದರ ಹಿಂದೆ ರಾಜಕೀಯ ಅಡಗಿದೆ. ಬಿಜೆಪಿ ಜೊತೆ ಮೈತ್ರಿ ಇರುವ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕರ ಮತಗಳ ಜೊತೆಗೆ ಕಾಂಗ್ರೆಸ್‌ನಿಂದಲೂ ಕೆಲವರು ಅಡ್ಡ ಮತದಾನ ಮಾಡಿಸುವ ಲೆಕ್ಕಾಚಾರವನ್ನು ಬಿಜೆಪಿ ಹೊಂದಿತ್ತು.

ಜೊತೆಗೆ ಆಡಳಿತರೂಢ ಕಾಂಗ್ರೆಸ್ ಪಕ್ಷವನ್ನ ಇಕ್ಕಟ್ಟಿಗೆ ಸಿಲುಕಿಸಿ, ವಿಚಲಿತಗೊಳ್ಳುವಂತೆ ಮಾಡುವ ಇರಾದೆಯೊಂದಿಗೆ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿಯ ಅಭ್ಯರ್ಥಿಯಾಗಿ ಕುಪೇಂದ್ರ ರೆಡ್ಡಿ ಕಣಕ್ಕೆ ಇಳಿದಿದ್ದರು.

ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಬಿಜೆಪಿ ಜೆಡಿಎಸ್ ಲೆಕ್ಕಾಚಾರವನ್ನ ತಲೆಕೆಳಗಾಗುವಂತೆ ರಾಜಕೀಯ ದಾಳವನ್ನ ಉರುಳಿಸಿದರು. ಗಾಲಿ ಜನಾರ್ದನ್ ರೆಡ್ಡಿ ಸೇರಿದಂತೆ ರಾಜ್ಯದ ಎಲ್ಲಾ ಪಕ್ಷೇತರ ಶಾಸಕರ ಬೆಂಬಲ ಪಡೆಯುವಲ್ಲಿ ಕಾಂಗ್ರೆಸ್ ಸಫಲವಾಯಿತು.

ಆದರೆ ಇದೆಲ್ಲದಕ್ಕಿಂತ ಹೆಚ್ಚಾಗಿ ಬಿಜೆಪಿಯ ಶಾಸಕ ಎಸ್.ಟಿ.ಸೋಮಶೇಖರ್ ಅವರಿಂದ ಅಡ್ಡ ಮತದಾನ ಮಾಡಿಸುವಲ್ಲಿ ಕಾಂಗ್ರೆಸ್ ಯಶಸ್ವಿಯಾಗಿದ್ದು ಬಹುದೊಡ್ಡ ರಾಜಕೀಯ ತಂತ್ರಗಾರಿಕೆ. ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ಬಿಜೆಪಿಯ ಮತ್ತೋರ್ವ ಶಾಸಕ ಶಿವರಾಮ್ ಹೆಬ್ಬಾರ್ ಅವರನ್ನು ಮತದಾನ ಪ್ರಕ್ರಿಯೆಯಿಂದ ದೂರ ಉಳಿಯುವಂತೆ ಮಾಡುವಲ್ಲಿಯೂ ಕಾಂಗ್ರೆಸ್ ಸಫಲವಾಗಿದೆ.

ರಾಜ್ಯಸಭೆ ಚುನಾವಣೆಯ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಮುಜುಗರ ಉಂಟು ಮಾಡುವ ಬಿಜೆಪಿ ಪ್ರಯತ್ನ ಸಂಪೂರ್ಣ ವಿಫಲವಾಗಿದೆ. ಯಾವ ನಿಟ್ಟಿನಿಂದ ನೋಡಿದರೂ 5ನೇ ಅಭ್ಯರ್ಥಿ ಆಯ್ಕೆಯಾಗುವುದು ಸಾಧ್ಯವಿಲ್ಲ ಎನ್ನುವ ಅರಿವಿದ್ದರೂ, ಬಿಜೆಪಿ ಹಾಗೂ ಜೆಡಿಎಸ್ ಕುಪೇಂದ್ರ ರೆಡ್ಡಿ ಅವರನ್ನು ಕಣಕ್ಕಿಳಿಸಿ, ತನ್ನ ಕಾಲ ಮೇಲೆ ತಾನೇ ಕಲ್ಲು ಹಾಕಿಕೊಂಡಂತಾಗಿದೆ. ಸದ್ಯಕ್ಕೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಗಟ್ಟಿಯಾಗಿರಬಹುದು. ಆದರೆ ಚುನಾವಣೆ ಮೇಲೆ ಮೈತ್ರಿ ಯಾವುದೇ ಪರಿಣಾಮ ಬೀರುವುದಿಲ್ಲ ಎನ್ನುವ ಸ್ಪಷ್ಟ ಚಿತ್ರಣ ರಾಜ್ಯದ ಜನರಿಗೆ ಅರಿವಾಗಿದೆ.

# ತಂಬಾಕು ನಿಯಂತ್ರಣ ಜಾಗೃತಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಬೀಡಿ, ಸಿಗರೇಟ್ ಸೇವನೆಯಿಂದ ಕ್ಯಾನ್ಸರ್ ರೋಗಕ್ಕೆ ದಾರಿ ಮಾಡಿಕೊಟ್ಟಂತೆ. ದೇಹಕ್ಕೆ ಆಮ್ಲಜನಕದ ಕೊರತೆ ಉಂಟಾಗುವ ಮೂಲಕ ನೇರವಾಗಿ ಮೆದುಳಿಗೆ ಹಾನಿಯುಂಟುಮಾಡುತ್ತದೆ ಮತ್ತು ತಂಬಾಕು ಸೇವನೆಯಿಂದ ಪ್ರತಿಯೊಂದು ಜೀವಕೋಶದ ಮೇಲೂ ದುಷ್ಪರಿಣಾಮ ಬೀರುತ್ತದೆ. ಪ್ರಮುಖವಾಗಿ ಹೃದಯಕ್ಕೆ ಸಂಬಂದಿತ ಹಾಗೂ ಶ್ವಾಸಕೋಶ ಕ್ಯಾನ್ಸರ್ ಕಾಯಿಲೆಗೆ ಮನುಷ್ಯ ತುತ್ತಾಗುತ್ತಾನೆ ಎಂದು ರಂಗಚೌಕಿ ಕಲಾ ತಂಡದ ನಾಯಕ ಸರದಾರ ಬಿ.ನೀನಾಸಂ ತಿಳಿಸಿದರು.

ಪಟ್ಟಣದ ಐಬಿ ವೃತ್ತದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಮರಿಯಮ್ಮನಹಳ್ಳಿಯ ರಂಗಚೌಕಿ ಕಲಾ ತಂಡದ ವತಿಯಿಂದ ರಾಷ್ಟ್ರೀಯ ತಂಬಾಕು ನಿಯಂತ್ರಣ ಜಾಗೃತಿಯಲ್ಲಿ ಅವರು ಮಾತನಾಡಿದರು.

ಇಂತಹ ದುಶ್ಚಟಗಳಿಂದ ಹೊರಬರಲು ಹತ್ತಿರದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ನಿಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ, ಕುಟುಂಬದ ಜೊತೆ ಅನ್ಯೋನ್ಯತೆಯಿಂದ ಜೀವಿಸಿ ಎನ್ನುವ ಸಂದೇಶವನ್ನು ರಂಗಚೌಕಿ ಕಲಾ ತಂಡದ ವತಿಯಿಂದ ಬೀದಿ ನಾಟಕ ಪ್ರದರ್ಶಿಸುವ ಮೂಲಕ ಜನರಿಗೆ ಅರಿವು ಮೂಡಿಸಿದರು.

ಕಲಾವಿದರಾದ ದಿವ್ಯಾ, ಲಕ್ಷ್ಮೀ, ಸೋಮಣ್ಣ, ಷಣ್ಮುಖ, ಬಸವರಾಜ, ಚಂದ್ರಕಾಂತ್, ಅನಿಲ್, ಮತ್ತು ಪಟ್ಟಣದ ಸಾರ್ವಜನಿಕರು ನಾಟಕವನ್ನು ವೀಕ್ಷಿಸಿದರು.

## ಫೆಬ್ರುವರಿ 28, ರಾಷ್ಟ್ರೀಯ ವಿಜ್ಞಾನ ದಿನಾಚರಣೆ | ನಮ್ಮ ರಾಮನ್, ನಮ್ಮ ಹೆಮ್ಮೆ

# ಸುಸ್ಥಿರ ಭಾರತದ ಭವಿಷ್ಯಕ್ಕಾಗಿ ವಿಜ್ಞಾನ

ಸುಸ್ಥಿರ ಭಾರತ ಎಂದರೆ ಸ್ವಾವಲಂಬಿ ಭಾರತ. ಇದು ಸಾಧ್ಯವೇ ಎಂಬ ಪ್ರಶ್ನೆ ಎಲ್ಲರಲ್ಲೂ ಮೂಡುವುದು ಸಹಜ. ಆದರೆ ನಾವು ಈಗಾಗಲೇ ಅನುಭವಿಸಿದ ಕೊರೋನಾ ಸಮಯವನ್ನು ನೆನೆಸಿಕೊಂಡರೆ ನಾವೂ ಸ್ವಾವಲಂಬಿಯಾಗಿದ್ದೇವೆ, ಸುಸ್ಥಿರ ಭಾರತ ಕಟ್ಟಬಲ್ಲೆವು ಎಂಬ ನಂಬಿಕೆ ಹುಟ್ಟುತ್ತದೆ. ಉದಾಹರಣೆ ನಾವು ಸಂಶೋಧಿಸಿದ ಕೊರೋನಾ ವ್ಯಾಕ್ಸಿನ್, ಸ್ವದೇಶಿ ಪಿ.ಪಿ.ಇ ಕಿಟ್‌ಗಳು, ಸ್ವದೇಶಿ ಎನ್-95 ಮುಖಗವಸುಗಳು ಇತ್ಯಾದಿ ಆತ್ಮ ನಿರ್ಭರ ಭಾರತದ ಪೀಠಿಕೆಯಲ್ಲವೇ ಕೇವಲ ಒಂದು ಯುದ್ಧವನ್ನು ಗೆದ್ದರಾಯಿತೆ, ನಾವಿನ್ನೂ ನಮ್ಮಲ್ಲಿಯ ಆಂತರಿಕ, ವ್ಯಾವಹಾರಿಕ, ರಾಜಕೀಯದಂತಹ ಯುದ್ಧಗಳನ್ನು ಗೆಲ್ಲಬೇಕಿದೆ. ಅಂದರೆ ಮಾತ್ರ ಸುಸ್ಥಿರ ಭಾರತ ಕಟ್ಟಲು ಸಾಧ್ಯ. ವ್ಯಾವಹಾರಿಕವಾಗಿ, ಶೈಕ್ಷಣಿಕವಾಗಿ, ದೇಶರಕ್ಷಣೆಯಂತಹ ವಿಷಯಗಳಲ್ಲದೇ ವಿಜ್ಞಾನದಿಂದ ಸುಸ್ಥಿರ ಭಾರತ ಕಟ್ಟಲು ಸಾಧ್ಯವೇ ಎಂಬುದನ್ನು ಅರ್ಥೈಸಿಕೊಳ್ಳಲು 2024ರ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಘೋಷವಾಕ್ಯವನ್ನು 'ಸುಸ್ಥಿರ ಭವಿಷ್ಯಕ್ಕಾಗಿ ವಿಜ್ಞಾನ' ಎಂದು ನೀಡಿದ್ದಾರೆ.

ಇಂದು ವಿಜ್ಞಾನ ಎಂದರೆ ಕೇವಲ ದೂರದರ್ಶನ, ಮೊಬೈಲ್, ಕಂಪ್ಯೂಟರ್ ಹಾಗೂ ಕೃತಕ ಬುದ್ಧಿಮತ್ತೆಯನ್ನು ಸೃಷ್ಟಿಸುವದು ಎಂಬಂತಾಗಿದೆ. ಆದರೆ ಈ ಎಲ್ಲ ಅಧುನಿಕ ಯಂತ್ರಗಳಿಗೆ ಪ್ರಮುಖವಾದ ಶಕ್ತಿಯ ಮೂಲ ಸೌರಶಕ್ತಿಯನ್ನೇ ನಾವು ಅಲಕ್ಷಿಸುತ್ತಿದ್ದೇವೆ.



ವಿಪರ್ಯಾಸ ಎನ್ನುವಂತೆ ಇದೇ ಭರತ ಖಂಡದಲ್ಲಿ 7ನೇ ನವೆಂಬರ್ 1888ರಲ್ಲಿ ತಮಿಳುನಾಡಿನ ತಂಜಾವುರು ಜಿಲ್ಲೆಯ ತಿರುವೈನಾಕಾವಲ್ ಎಂಬಲ್ಲಿ ಒಬ್ಬ ಬ್ರಾಹ್ಮಣ ದಂಪತಿಗಳ ಮಗನಾಗಿ ಜನಿಸಿದವರೇ ಸರ್ ಸಿ.ವಿ. ರಾಮನ್. ಇವರು ಹುಟ್ಟಿನಿಂದಲೇ ಪ್ರತಿಭಾವಂತರು ಎನ್ನಲು 14ನೇ ವಯಸ್ಸಿನಲ್ಲಿಯೇ ಬಂಗಾರ ಪದಕ ಸಹಿತ ಪ್ರಶಸ್ತಿಯೊಂದಿಗೆ ಪದವಿಯನ್ನು ಮುಗಿಸಿದರು.

18 ವರ್ಷದವರಿರುವಾಗಲೇ MA.,F.C.S ಸ್ನಾತಕೊತ್ತರ ಪದವಿಯನ್ನು ಮುಗಿಸಿ ವೈವಾಹಿಕ ಜೀವನದೊಂದಿಗೆ ಕಲ್ಕತ್ತಾ, ರಂಗೂನ, ಹಾಗೂ ನಾಗಪೂರಗಳಲ್ಲಿ ವಿತ್ತಾಧಿಕಾರಿಯಾಗಿ ಸೇವೆಸಲ್ಲಿಸುತ್ತಿರುವಾಗಲೂ ವಿಜ್ಞಾನವು ಅವರನ್ನು ಕೆಣಕುತ್ತಿತ್ತು. ನಂತರ ಕಲ್ಕತ್ತಾ ವಿಶ್ವವಿದ್ಯಾಲಯದಲ್ಲಿ ಭೌತಶಾಸ್ತ್ರ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿರುವಾಗಿ ಆಕಾಶವೇಕೆ ನೀಲಿ, ಸಮುದ್ರವೇಕೆ ನೀಲಿ ಎಂಬ ಜಿಜ್ಞಾಸೆ ಅವರನ್ನು 'ರಾಮನ್ ಎಫೆಕ್ಟ್' ಅಥವಾ 'ರಾಮನ್ ಪರಿಣಾಮ'ವನ್ನು ಸಂಶೋಧಿಸಲು ಪ್ರಚೋದಿಸಿತು.

ಈ ಸಿದ್ಧಾಂತದ ಪ್ರಕಾರ ವಿವಿಧ ಪಾರದರ್ಶಕ ವಸ್ತುಗಳ ಮೂಲಕ ಬೆಳಕನ್ನು ಹಾಯಿಸಿದಾಗ ಬೆಳಕಿನ ಕಿರಣಗಳು ಚದುರಿ ವಿವಿಧ ವರ್ಣಪಟಲಗಳು ಹೊರಡುತ್ತವೆ. ಹಾಗೆ ಹೊರಬಿದ್ದ ಪಟಲಗಳಲ್ಲಿ ಹೊಸಗೆರೆಗಳು ಕಾಣಿಸಿಕೊಳ್ಳುತ್ತವೆ. ಈ ಗೆರೆಗಳಿಗೂ ಬೆಳಕಿನ ಚದುರುವಿಕೆಗೂ ಮೂಲ ವಸ್ತುವಿನಲ್ಲಿರುವ ಅಣು ಸಂಯೋಜನೆ ಕಾರಣ ಎಂದು ತಮ್ಮ ಸಿದ್ಧಾಂತವನ್ನು ಬೆಂಗಳೂರಿನ ಸೆಂಟ್ರಲ್ ಕಾಲೇಜಿನ ಭೌತಶಾಸ್ತ್ರ ಸಂಘದ ಅಡಿಯಲ್ಲಿ 28ನೇ ಫೆಬ್ರುವರಿ 1928ರಂದು ಮೊಟ್ಟ ಮೊದಲ ಬಾರಿಗೆ ಪ್ರಸ್ತುತಪಡಿಸಿದರು. ಅದರ ದ್ಯೋತಕವಾಗಿಯೇ ಪ್ರತಿ ವರ್ಷ ಫೆಬ್ರುವರಿ 28ರಂದು ನಾವು ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಆಚರಿಸುತ್ತೇವೆ.

ಹಲವು ರಾಷ್ಟ್ರಗಳ ವಿಶ್ವವಿದ್ಯಾಲಯಗಳಿಂದ ಪ್ರಶಸ್ತಿಗಳನ್ನು ಪಡೆದ ರಾಮನ್ನರಿಗೆ 1954ರಲ್ಲಿ ಭಾರತದ ಸರ್ವಶ್ರೇಷ್ಠ ಪ್ರಶಸ್ತಿಯಾದ 'ಭಾರತ ರತ್ನ' ನೀಡಿ ಗೌರವಿಸಲಾಯಿತು. ಭಾರತದ ವಿಜ್ಞಾನ ಸಂತ 21ನೇ ನವೆಂಬರ್, 1970ರಂದು ವಿಧಿವಶರಾದರು.

ರಾಷ್ಟ್ರೀಯ ವಿಜ್ಞಾನ ದಿನಚರಣೆಯಂದು, ರಾಷ್ಟೀಯ, ಅಂತಾರಾಷ್ಟ್ರೀಯ ವೈಜ್ಞಾನಿಕ ಅವಿಷ್ಕಾರಗಳನ್ನು ಪ್ರತಿಯೊಬ್ಬ ಭಾರತೀಯ ತಿಳಿದುಕೊಳ್ಳುವಂತೆ ಮಾಡುವುದಕ್ಕಾಗಿ ಕಾರ್ಯಕ್ರಮಗಳನ್ನು ಆಯೋಜಿಸುತ್ತದೆ. ಇದರಿಂದ ಪ್ರತಿಯೊಬ್ಬ ಭಾರತೀಯ ವಿಜ್ಞಾನಿಯ ಕೊಡುಗೆಯನ್ನು ಸ್ಮರಿಸುವುದರೊಂದಿಗೆ ಜನಸಾಮಾನ್ಯರಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಮೂಡಿಸಿ ಅವರು ತಮ್ಮ ವೃತ್ತಿ ಜೀವನವನ್ನು ಜನಪರ ಉಪಯೋಗಿ ವಿಜ್ಞಾನ ತಂತ್ರಜ್ಞಾನದಲ್ಲಿ ಮುಂದುವರೆಸುವಂತೆ ಪ್ರೇರಣೆ ನೀಡುತ್ತದೆ.

ವಿಶ್ವದ ಸುಸ್ಥಿರತೆ ಆ ದೇಶ ಬಳಸುವ ವಿಜ್ಞಾನ ತಂತ್ರಜ್ಞಾನದ ಮೇಲೆ ಅವಲಂಬಿತವಾಗಿದೆ. ಏಕೆಂದರೆ ದೇಶದ ಭವಿಷ್ಯ ನಿಂತಿರುವುದೇ ಪರಿಸರ, ಆಹಾರ, ಶಿಕ್ಷಣ, ರಕ್ಷಣೆ ಹಾಗೂ ನಂಬಿಕೆಯ ಮೇಲೆ. ಆದ್ದರಿಂದ ಪ್ರತಿಯೊಂದು ರಾಷ್ಟ್ರಗಳೂ ಪ್ರಜೆಗಳಿಗೆ ಪ್ರಾಥಮಿಕ ಹಂತದಿಂದ ಪರಿಸರ ರಕ್ಷಣೆ, ಆಹಾರ ಉತ್ಪಾದನೆ, ವಿಜ್ಞಾನದ ಅವಿಷ್ಕಾರಗಳ ಮೇಲೆ ನಂಬಿಕೆ, ಆಸಕ್ತಿ ಬೆಳೆಯುವಂತೆ ಜೀವನ ಪದ್ಧತಿ ರೂಢಿಸಿದಲ್ಲಿ ಈ ವರ್ಷದ ಘೋಷವಾಕ್ಯಕ್ಕೊಂದು ಅರ್ಥ ಬಂದೀತು.

**– ರಾಮಚಂದ್ರ ಮೋನೆ.**
ವಿಜ್ಞಾನ ಶಿಕ್ಷಕರು, ಗದಗ.


## ಫೆಬ್ರವರಿ 28, 'ರಾಷ್ಟ್ರೀಯ ವಿಜ್ಞಾನ ದಿನ'(ಸರ್ ಸಿ.ವಿ. ರಾಮನ್ ಜನ್ಮದಿನ)ದ ನಿಮಿತ್ತ ವಿಶೇಷ ಲೇಖನ

# ವಿಜ್ಞಾನ ವಿದ್ಯಾರ್ಥಿಗಳ ರೋಲ್ ಮಾಡೆಲ್

ಫೆಬ್ರವರಿ 28, ದೇಶವೇ ಸಂಭ್ರಮಿಸುವ ದಿನ. ವಿಜ್ಞಾನ ಜಗತ್ತಿನಲ್ಲಿ ಭಾರತವನ್ನು ಮೇರು ಶಿಖರಕ್ಕೆ ಕೊಂಡೊಯ್ದ ಸರ್ ಸಿ.ವಿ. ರಾಮನ್ ತಮ್ಮ ಮಹತ್ತರ ಸಂಶೋಧನೆಯನ್ನು ಪ್ರಸ್ತುತ ಪಡಿಸಿದ ದಿನವಿದು. 1921, ಸೆಪ್ಟೆಂಬರ್ ತಿಂಗಳು ಇಂಗ್ಲೆಂಡಿನಲ್ಲಿ ವೈಜ್ಞಾನಿಕ ಸಮ್ಮೇಳನವೊಂದರಲ್ಲಿ ಭಾಗವಹಿಸಿ ಮರಳಿ ತವರಿಗೆ ರಾಮನ್ ಪ್ರಯಾಣಿಸುತ್ತಿರುವ ಸಮಯ ಹಡಗು ಮೆಡಿಟರೇನಿಯನ್ ಸಮುದ್ರದಲ್ಲಿ ಸಾಗುತ್ತಿದ್ದಾಗ ಸಮುದ್ರದ ಅಚ್ಚ ನೀಲಿ ಬಣ್ಣವನ್ನು ಕಂಡ ರಾಮನ್ ಬೆರಗಾದರು. ಈ ಬಣ್ಣ ಸಮುದ್ರಕ್ಕೆ ಬಂದದ್ದು ಹೇಗೆ ಎಂಬ ಪ್ರಶ್ನೆ ಅವರನ್ನು ಕಾಡತೊಡಗಿತು.

ರಾಮನ್ ತನ್ನೆದುರು ಹರಡಿ ಚೆಲ್ಲಿದ ನೀಲ ನೀರಿನ ರಾಶಿಯನ್ನು ನೋಡುತ್ತಿದ್ದಂತೆ ನೀರಿನ ಅಣುಗಳಿಂದ ನೀಲಿ ಬಣ್ಣದ ಬೆಳಕು ಅತ್ಯಧಿಕ ಪ್ರಮಾಣದಲ್ಲಿ ಚದರಿಸಲ್ಪಡುವುದೇ ಕಾರಣವೆಂದು ಅರಿತು ಹಡಗಿನಲ್ಲಿಯೇ ಸಮುದ್ರದ ನೀರನ್ನು ಬಾಟಲಿಗಳಲ್ಲಿ ಸಂಗ್ರಹಿಸಿ ಕಡಲಿನ ನೀಲಿ ಬಣ್ಣದ ಕಾರಣವನ್ನು ಅರಿಯಲು ಪ್ರಯೋಗ ಮಾಡುತ್ತ ಹಡಗಿನ ತುಂಬಾ ಪ್ರಯಾಣದ ಸಮಯದಲೆಲ್ಲಾ ಓಡಾಡಿದ್ದರು. ಏಳು ವರ್ಷಗಳ ಸತತ ಪರಿಶ್ರಮದ ಬಳಿಕ, 1928 ಫೆಬ್ರವರಿ 28 ಬೆಳಗ್ಗೆ ತಮ್ಮ ಪ್ರಯೋಗದಲ್ಲಿ ರಾಮನ್ ಯಶಸ್ಸು ಕಂಡರು.

ದ್ರವ ಮಾಧ್ಯಮದಲ್ಲಿ ಅಣುಗಳು ಬೆಳಕಿನ ಅಲೆಗಳನ್ನು ಚದರಿಸುವ ಮೂಲಕ ಬೆಳಕಿನ ರೋಹಿತ ರೇಖೆಯ ಅಲೆಯುದ್ದ ವ್ಯತ್ಯಾಸವಾಗಿ ಹೊಸ ರೇಖೆಗಳು ಪ್ರಕಟವಾಗುವ ವಿನೂತನ ವಿದ್ಯಮಾನವನ್ನು ಅಂದು ರೋಹಿತ ದರ್ಶಕದಲ್ಲಿ ಗಮನಿಸಿದರು ಮತ್ತು ಆ ರೋಹಿತದ ಛಾಯಾ ಚಿತ್ರವನ್ನು ಪಡೆಯುವಲ್ಲಿ ಯಶಸ್ವಿಯಾದರು. ಅಂದು ಪ್ರತಿಪಾದಿಸಿದ ಈ ವಿದ್ಯಮಾನ ಮುಂದೆ 'ರಾಮನ್ ಪರಿಣಾಮ' ಎಂಬ ಹೆಸರಿನಲ್ಲಿ ಸುಪ್ರಸಿದ್ಧವಾಗಿ ಹಲವಾರು ಸಂಶೋಧನೆಗಳಿಗೆ ಮುನ್ನುಡಿಯಾಯಿತು.



1987ರಿಂದಲೂ ದೇಶಾದ್ಯಂತ ಫೆಬ್ರವರಿ 28ರಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತಿದೆ. 1930ರಿಂದ ಇಂದಿನವರೆಗೆ ಭಾರತದಲ್ಲೇ ಹುಟ್ಟಿ, ಬೆಳೆದು, ತಮ್ಮ ಕಾರ್ಯಕ್ಷೇತ್ರವನ್ನು ವಿದೇಶಕ್ಕೆ ಬದಲಿಸದ ಏಕೈಕ ನೊಬಲ್ ಪುರಸ್ಕೃತ ವಿಜ್ಞಾನಿ ಸಿ.ವಿ.ರಾಮನ್. ಸರ್ ಚಂದ್ರಶೇಖರ ವೆಂಕಟರಾಮನ್, ನೋಬೆಲ್ ಪ್ರಶಸ್ತಿ ಗಳಿಸಿದ ಪ್ರಪ್ರಥಮ ಭಾರತೀಯ ವಿಜ್ಞಾನಿ. ಈ ಪ್ರಶಸ್ತಿಯನ್ನು 1930ರಲ್ಲಿ ಅವರದೇ ಹೆಸರಿಂದ ಅಲಂಕೃತವಾದ 'ರಾಮನ್ ಎಫೆಕ್ಟ್' ಎಂಬ ಶೋಧನೆಗಾಗಿ ಭೌತಶಾಸ್ತ್ರ ಕ್ಷೇತ್ರದಲ್ಲಿ ಪಡೆದರು. ಅವರು 7, 1888ರಲ್ಲಿ ತಮಿಳುನಾಡಿನ ತಿರುಚಿನಾಪಳ್ಳಿ ಜಿಲ್ಲೆಯ 'ತಿರುವನೈಕಾವಲ್' ಎಂಬಲ್ಲಿ ಜನಿಸಿದರು. ತಂದೆ ಚಂದ್ರಶೇಖರ್ ಕಾಲೇಜಿನಲ್ಲಿ ಭೌತಶಾಸ್ತ್ರ ಪ್ರಾಧ್ಯಾಪಕರಾಗಿದ್ದರು. ತಾಯಿ, ಪಾರ್ವತಿ ಅಮ್ಮಾಳ್. ಕುಟುಂಬ ದೊಡ್ಡದಾಗಿದ್ದರಿಂದ ಬಡತನದ ಸ್ಥಿತಿಯಲ್ಲಿದ್ದರು. ರಾಮನ್‌ಗೆ ಸಾಕಷ್ಟು ಶೈಕ್ಷಣಿಕ ಸೌಕರ್ಯಗಳನ್ನು ಒದಗಿಸುವ ಅನುಕೂಲ ಅವರಿಗಿರಲಿಲ್ಲ. ಮೇಧಾವಿಯಾಗಿದ್ದ ರಾಮನ್ ವಿದ್ಯಾಭ್ಯಾಸ ಹಾಗೂ ವೃತ್ತಿಜೀವನದಲ್ಲಿ ಮಾಡಿದ ಸಾಧನೆ ಅಪಾರವಾಗಿತ್ತು.

ಇಂದು 'ರಾಮನ್ ಪರಿಣಾಮ' ದ್ರವ್ಯದ ಅಣುರಚನೆಯನ್ನು ನಿರ್ಧರಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತಿದೆ. ಮೈಕ್ರೋವೇವ್, ಲೇಸರ್, ಇನ್ಫ್ರಾರೆಡ್, ಅಲ್ಟ್ರಾ ವಯೋಲೆಟ್, ಮತ್ತು ಕ್ಷ-ಕಿರಣ ರಾಮನ್ ಸ್ಪೆಕ್ಟ್ರೋಸ್ಕೋಪಿ ಇಂದು ಮುಂಚೂಣಿಯಲ್ಲಿರುವ ಸಂಶೋಧನಾ ಕ್ಷೇತ್ರಗಳು. ರಾಮನ್ ಮತ್ತು ಅವರು ಹುಟ್ಟು ಹಾಕಿದ ಅಪ್ಪಟ ಸ್ವಾವಲಂಬನೆಯ ವಿಜ್ಞಾನ ಚಿಂತನೆಯ ಬಗ್ಗೆ ಚರ್ಚೆ ಮಾಡಲೇಬೇಕಾದ ಸಂದರ್ಭವಿದು.

ಸೂಪರ್ ವಾಹಕಕ್ಕೆ ಸಂಬಂಧಿಸಿದ ರಸಾಯನ ವಿಜ್ಞಾನ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿ ಇದೀಗ ನ್ಯಾನೊ ತಂತ್ರಜ್ಞಾನದ ಅಭಿವೃದ್ಧಿಯಲ್ಲಿ ಮಗ್ನರಾಗಿರುವ ಚಿಂತಾಮಣಿ ನಾಗೇಶ ರಾಮಚಂದ್ರ ರಾವ್, ವಾಯು ಚಲನ ವಿಜ್ಞಾನದ ಜಗದ್ಗುರು ರೊದ್ದ ನರಸಿಂಹ, ಬಾಹ್ಯಾಕಾಶ ಕ್ಷೇತ್ರದಲ್ಲಿನ ದೇಶದ ಅಪ್ರತಿಮ ಸಾಧನೆಯ ರೂವಾರಿ ಉಡುಪಿ ರಾಮಚಂದ್ರ ರಾವ್, ಜೀವ ವಿಜ್ಞಾನದ ಕ್ಲಿಷ್ಟ ಲೆಕ್ಕಾಚಾರಗಳನ್ನು ಗಣಿತದೊಂದಿಗೆ ತಾಳೆನೋಡುತ್ತಾ ಪರಿಸರ ವಿಜ್ಞಾನದಲ್ಲಿ ವಿಶ್ವಮಾನ್ಯ ಸಾಧನೆಗೈದಿರುವ ಮಾಧವ ಗಾಡ್ಗೀಳ್, ಪರಮಾಣು ವಿಜ್ಞಾನವನ್ನು ಕಲಿತೂ ಗಾಂಧಿವಾದಿಯಾಗಿ ರೂಪುಗೊಂಡು ಸಾಮಾನ್ಯರಿಗೆ ವಿಜ್ಞಾನ ಮುಟ್ಟಿಸಿದ ಹೆಚ್.ನರಸಿಂಹಯ್ಯ, ರಾ-ಕೆಟ್ ತಂತ್ರಜ್ಞಾನ ಅಭ್ಯಸಿಸಿ ದೇಶದ ಮುಂಚೂಣಿ ಯೋಜನೆಗಳ ಸೂತ್ರಧಾರಿಯಾದ ಅಬ್ದುಲ್ ಕಲಾಮ್ ನಮ್ಮ ವಿಜ್ಞಾನ ವಿದ್ಯಾರ್ಥಿಗಳಿಗೆ ರೋಲ್ ಮಾಡಲ್‌ಗಳಾಗಬೇಕು. ಹಾಗಾದಲ್ಲಿ ಮಾತ್ರ ನಮ್ಮ ದೇಶವೂ ಮುಂಚೂಣಿ ರಾಷ್ಟ್ರಗಳ ಸಾಲಿನಲ್ಲಿ ತಲೆಯೆತ್ತಿ ನಿಲ್ಲಬಹುದು. ವಿಜ್ಞಾನಗಳು ಕೇವಲ ಪ್ರಯೋಗಗಳಿಗೆ ಸೀಮಿತವಾಗದೆ, ಎಲ್ಲ ಶೋಷಿತ ಮನುಜರ ಬಿಡುಗಡೆ-ಯ ಹಾದಿಯಾಗಿ, ಸಾಮಾಜಿಕ ದುರಂತಗಳ ಬಗ್ಗೆ ಎಚ್ಚರಿಸುವ ದನಿಯಾಗಬೇಕು. ಇಂದು ಮಾತ್ರವಲ್ಲ, ಅನುದಿನವೂ ವಿಜ್ಞಾನ ದಿನವಾಗಲಿ ಎಂಬುದು ವಿಜ್ಞಾನಾಸಕ್ತರೆಲ್ಲರ ಹಾರೈಕೆ.

> ವಿಜ್ಞಾನದ ಮೂಲತತ್ವವು ಸ್ವತಂತ್ರ ಚಿಂತನೆ, ಕಠಿಣ ಪರಿಶ್ರಮ ಮತ್ತು ಉಪಕರಣಗಳಲ್ಲ. ನಾನು ನನ್ನ ನೊಬೆಲ್ ಪ್ರಶಸ್ತಿಯನ್ನು ಪಡೆದಾಗ, ನನ್ನ ಉಪಕರಣಗಳಿಗೆ ನಾನು 200 ರೂಪಾಯಿಗಳನ್ನೂ ಖರ್ಚು ಮಾಡಿರಲಿಲ್ಲ.
> **– ಸಿ.ವಿ. ರಾಮನ್**



**– ಎಂ.ಎಚ್. ಸವದತ್ತಿ.**
ಸಹ ಶಿಕ್ಷಕರು, ಸರಕಾರಿ ಪ್ರೌಢಶಾಲೆ
ಏಕಲಾಸಪೂರ.

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ




■ ವಿಜಯಸಾಕ್ಷಿ ಸುದ್ದಿ, ಗದಗ

ಅಮರ್ ರಾಜಾ ಇನ್ಫ್ರಾ ಪ್ರೈ.ಲಿ ಗದಗ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಗದಗ, ಬಸವೇಶ್ವರ ಬ್ಲಡ್ ಬ್ಯಾಂಕ್ ಗದಗ, ಹಿಂದ್ ಎಜುಕೇಷನ್ ಅಸಿಸ್ಟನ್ಸ್ ಟ್ರಸ್ಟ್ ಗದಗ, ಮಾ ವಜ್ರೇಶ್ವರಿ ಫೌಂಡೇಶನ್ ಗದಗ ಇವುಗಳ ಸಹಯೋಗದಲ್ಲಿ 200 ಮೆ.ವ್ಯಾ ಸೋಲಾರ್ ಪಾವರ್ ಪ್ರೊಜೆಕ್ಟ್ ಗದಗದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳಿಂದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಹಾಗೂ ವಲಸೆ ಕಾರ್ಮಿಕರಿಗೆ ಸೊಳ್ಳೆ ಪರದೆ ಮತ್ತು ಸ್ಥಳೀಯ ಕಾರ್ಮಿಕರಿಗೆ ಹೈಜನಿಕ್ ಕಿಟ್ ವಿತರಣೆ ಕಾರ್ಯಕ್ರಮವನ್ನು ಸರ್ಜಾಪೂರ ಗ್ರಾಮದ ವ್ಯಾಪ್ತಿಯಲ್ಲಿರುವ ಸೋಲಾರ್ ಪಾವರ್ ಪ್ರೊಜೆಕ್ಟ್ ಕಾರ್ಯಸ್ಥಳದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಅಧ್ಯಕ್ಷತೆ ವಹಿಸಿದ್ದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಡಾ. ಆರ್.ಎನ್. ಗೋಡಬೋಲೆ ಅವರು ಮಾತನಾಡಿ, ರಕ್ತದಾನ ಎಲ್ಲ ದಾನಕ್ಕಿಂತ ಶ್ರೇಷ್ಠವಾಗಿದೆ. ಒಬ್ಬ ವ್ಯಕ್ತಿಯ ರಕ್ತದಾನದಿಂದಾಗಿ ಹಲವಾರು ಜೀವ ಉಳಿಸಲು ಸಾಧ್ಯವಾಗುತ್ತದೆ ಎಂದರು.

ಪ್ರೊಜೆಕ್ಟ್ ಮ್ಯಾನೇಜರ್ ಎ.ರವಿಕುಮಾರ, ಎಚ್.ಎಸ್.ಇ ಮ್ಯಾನೇಜರ್ ಎಂ.ಡಿ. ಇಮ್ತಿಯಾಜ್ ಸಾಂದರ್ಭಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ 54 ಕಾರ್ಮಿಕರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದರು. 20 ಕಾರ್ಮಿಕರಿಗೆ ಹೈಜೆನಿಕ್ ಕಿಟ್ ಹಾಗೂ 20 ಜನರಿಗೆ ಸೊಳ್ಳೆ ಪರದೆಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್‌ಆರ್‌ಐಪಿಎಲ್‌ನ ಎಚ್‌ಎಸ್‌ಇ ಲೀಡರ್ ಶರತ್‌ಕುಮಾರ, ಮಾ ವಜ್ರೇಶ್ವರಿ ಸಂಸ್ಥೆಯ ಅಧ್ಯಕ್ಷರು ಹಾಗೂ ರೆಡ್ ಕ್ರಾಸ್ ಸದಸ್ಯೆ ಸುವರ್ಣ ನಿಡಗುಂದಿ, ವೈದ್ಯಕೀಯ ವಿದ್ಯಾರ್ಥಿಗಳಾದ ಪವನ್, ಶಿವರಾಜ್, ನರೇಶ್, ಗುರುರಾಜ್ ಹಾಗೂ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ನೋಡಲ್ ಅಧಿಕಾರಿ ಪ್ರಕಾಶ ಗಾಣಿಗೇರ ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ॥ ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024-25ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಹಾಗೂ 25% ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು.

ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳು ಇತ್ಯಾದಿಗಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ https://sevasindhu.karnataka.gov.in (ಸೇವಾ ಸಿಂಧು) ಮೂಲಕ ಮಾರ್ಚ್ 15 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಯನ್ನು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಪಡೆಯಬಹುದಾಗಿದೆ. 08371-262911 ತಾಲೂಕು ಪಂಚಾಯತ್ ಆವರಣ, ಮುಂಡರಗಿ ; 08372-297494 ಮೌಲಾನಾ ಆಝಾದ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ; 08381-267258 ತಾಲೂಕು ಪಂಚಾಯತ್ ಆವರಣ, ರೋಣ ; 08377-245411 ತಹಸೀಲ್ದಾರ ಕಾರ್ಯಾಲಯ ರೂ.ನಂ:20, ನರಗುಂದ ; 08487-242810 ತಾಲೂಕು ಪಂಚಾಯತ್ ಹತ್ತಿರ, ಶಿರಹಟ್ಟಿ ಇವರನ್ನು ಸಂಪರ್ಕಿಸಬಹುದಾಗಿದೆ.

# ಅಂಬಿಗ, ಸುಣಗಾರ, ಸಮಾಜದವರು ಸಂಘಟಿತರಾಗಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಅಭಿವೃದ್ಧಿ ಹೊಂದಬೇಕಾದರೆ ಸಂಘಟನೆ ಬಹಳ ಅವಶ್ಯಕ. 35ನೇ ವಾರ್ಡಿನಲ್ಲಿ ವಾಸಿಸುವ ಸಮಾಜ ಬಾಂಧವರು ಸಮಾಜದ ಅಭಿವೃದ್ಧಿಗೆ ಶ್ರಮಿಸುವ ಸಂಘಟನೆಗಳೊಂದಿಗೆ ಕೈ ಜೋಡಿಸಿ ಎಂದು ಸಮಾಜದ ಜಿಲ್ಲಾಧ್ಯಕ್ಷರಾದ ರಾಮಣ್ಣ ಇರಕಲ್ಲ ಕರೆ ನೀಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ಕರೆದಿದ್ದ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಸಮಾಜ ಟ್ರಸ್ಟ್ ಪ್ರಧಾನ ಕಾರ್ಯದಶಿ ಸಂಗಮೇಶ ಹಾದಿಮನಿ ಮಾತನಾಡಿ, ಸಮಾಜದ ಯುವಕರು ಶರಣ ಸಂಸ್ಕೃತಿ ಅಳವಡಿಸಿಕೊಂಡು, ಉತ್ತಮ ವೈಚಾರಿಕತೆ ಬೆಳೆಸಿಕೊಂಡು, ಗ್ರಾಮ ಘಟಕ ಹಾಗೂ ತಾಲೂಕ ಘಟಕ ಸಮಾಜದ ಜನಜಾಗೃತಿ ಮಾಡಿ ಬಡ ಜನರ ಬದುಕು ಬದಲಾವಣೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿ ಎಂದರು.

ಸಮಾಜ ಟ್ರಸ್ಟ್‌ನ ಸದಸ್ಯ ಮಲ್ಲು ಬಾರಕೇರ ಮಾತನಾಡಿದರು.

ಈ ಸಂದರ್ಭದಲ್ಲಿ ಸದಸ್ಯರಾದ ಮಲ್ಲು ಬಾರಕೇರ, ಶಿವದೇವ ಹಾದಿಮನಿ, ಸಹ ಕಾರ್ಯದಶಿ ರವಿಕುಮಾರ ಗುಡಿಸಾಗರ, ಯುವ ಘಟಕದ ಅಧ್ಯಕ್ಷ ಮಂಜುನಾಥ ಗುಡಿಸಾಗರ, ಹರೀಶ ಬಾರಕೇರ, ರಾಜು ಬಾರಕೇರ, ಮಂಜು ಅಂಬಿಗೇರ, ಮಾನ್ವಿ, ಚಂದ್ರಶೇಖರ್ ಬಾರಕೇರ, ರಮೇಶ ಬೆನಕಲ್ಲ, ಮಂಜು ಹಂಪಸಾಗರ, ರಾಮಣ್ಣ ಬಾರಕೇರ, ತಿರಲಾಪುರ, ಶಹರ ಘಟಕ ಸಂಘಟನಾ ಕಾರ್ಯದಶಿ ರಾಜು ಪೂಜಾರ ಭಾಗವಹಿಸಿದ್ದರು.

# ಅರ್ಹ ಕಾರ್ಮಿಕರು ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಅರ್ಹ ಕಾರ್ಮಿಕರು ಇಲಾಖೆಯ ವಿವಿಧ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ನುಡಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಮಂಗಳವಾರದಂದು ಕಾರ್ಮಿಕ ಇಲಾಖೆಯಿಂದ ಏರ್ಪಡಿಸಲಾದ ಕಾರ್ಮಿಕ ಕಲ್ಯಾಣ ಜಾಗೃತಿ ರಥಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಾಗೃತಿ ರಥವು ಜಿಲ್ಲಾದ್ಯಂತ ಮಂಗಳವಾರದಿಂದ ಒಂದು ವಾರದವರೆಗೆ ಸಂಚರಿಸಲಿದ್ದು, ಕಾರ್ಮಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಬಿ.ಆರ್.ಜಾಧವ್ ಮಾತನಾಡಿ, ಇಲಾಖೆಯಿಂದ ಕುಟುಂಬ ಪಿಂಚಣಿ ಸೌಲಭ್ಯ, ದುರ್ಬಲತೆ ಪಿಂಚಣಿ, ಟೂಲ್ ಕಿಟ್ ಸೌಲಭ್ಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಸಹಾಯಧನ, ವೈದ್ಯಕೀಯ ಸಹಾಯ ಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯ ಧನ, ಮದುವೆ ಸಹಾಯ ಧನ, ತಾಯಿ ಮಗು ಸಹಾಯ ಹಸ್ತ ಹೀಗೆ ಕಾರ್ಮಿಕ ಇಲಾಖೆಯಿಂದ ಹಲವಾರು ಸೌಲಭ್ಯಗಳನ್ನು ಕಾರ್ಮಿಕರಿಗೆ ಒದಗಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯ ಸಂದೇಶ ಪಾಟೀಲ, ಕಾರ್ಮಿಕ ನಿರೀಕ್ಷಕ ಉಮೇಶ್ ಹುಲ್ಲಣ್ಣವರ ಸೇರಿದಂತೆ ಇತರರು ಇದ್ದರು.

## ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ವಿನೂತನ ಕಾರ್ಯಕ್ರಮ

# ಗಮನಸೆಳೆದ ಬಹುಭಾಷಾ ಕವಿಗೋಷ್ಠಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಮಹಾಕವಿ ಪಂಪ ಸಾಹಿತ್ಯ ವೇದಿಕೆ, ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತು ಮತ್ತು ಸೋಮೇಶ್ವರ ಭಕ್ತರ ಸೇವಾ ಸಮಿತಿ ಆಶ್ರಯದಲ್ಲಿ ಜರುಗಿದ ಬಹುಭಾಷಾ ಕವಿಗೋಷ್ಠಿ ಎಲ್ಲರ ಗಮನ ಸೆಳೆಯಿತು.

ಹಿರಿಯ ಸಾಹಿತಿಗಳಾದ ಪೂರ್ಣಾಜಿ ಖರಾಟೆ ಮರಾಠಿ ಕವನ, ಸಿ.ಜಿ. ಹಿರೇಮಠ ಕನ್ನಡ ಕವನಗಳನ್ನು ಓದುವುದರ ಮೂಲಕ ಕವಿಗೋಷ್ಠಿಗೆ ಚಾಲನೆ ನೀಡಿದರು. ಪೂರ್ಣಾಜಿ ಖರಾಟೆ ಅವರು 'ನನಗೆ ವಯಸ್ಸಾಯಿತು' ಎಂಬ ಕವನದ ಮೂಲಕ ಬಾಲ್ಯದಿಂದ ಇಳಿ ವಯಸ್ಸಿನವರೆಗಿನ ಜೀವನ ಮೌಲ್ಯವನ್ನು ತಿಳಿಸಿದರು. ಸಿ.ಜಿ. ಹಿರೇಮಠರ ಕವನ ಪ್ರಸ್ತುತ ಪರಿಸ್ಥಿತಿಯನ್ನು ತೆರೆದಿಟ್ಟಿತು.




ಬಾಲಕಿ ತನ್ವಿ ವರ್ಣೇಕರ ವಾಚಿಸಿದ ಕೊಂಕಣಿ ಭಾಷೆಯ ಕವನ ಎಲ್ಲರ ಮನ ಗೆದ್ದಿತು. ಇಡೀ ದೇಶವನ್ನೇ ತನ್ನ ಮನೆಯನ್ನಾಗಿ ಭಾವಿಸಿ ಸಹಬಾಳ್ವೆ ನಡೆಸಿದರೆ ಸುಖ, ಶಾಂತಿ ಸಿಗಲು ಸಾಧ್ಯ ಎಂಬ ಅರ್ಥವನ್ನು ಕವನ ಬಿಂಬಿಸಿತು. ವಕೀಲ ಆರ್.ವಿ. ವರ್ಣೇಕರ ಕೊಂಕಣಿ ಕವನ, ರೇಖಾ ವಡಕಣ್ಣವರ ಕನ್ನಡ ಕವಿತೆ, ಎಸ್.ಬಿ. ಮಳಲಿ ಮತ್ತು ಜೆ.ಎಸ್. ರಾಮಶೆಟ್ಟರ ಅವರ ಆಂಗ್ಲ ಭಾಷೆಯ ಕವಿತೆಗಳು, ಅಲ್ತಾಫ್ ಹವಾಲ್ದಾರ ಸಾದರಪಡಿಸಿದ ಉರ್ದು ಭಾಷೆಯ ಶಾಯರಿ, ಶಿಕ್ಷಕರಾದ ಎಸ್.ಎಚ್. ಪೂಜಾರ ಹಾಗೂ ಚಂದ್ರಶೇಖರ ವಡಕಣ್ಣವರ ವಾಚಿಸಿದ ಹಿಂದಿ ಭಾಷೆಯ ಕವನಗಳು, ವಕೀಲ ವಿಠಲ ನಾಯಕ ಮತ್ತು ಶಿಕ್ಷಕ ಎಸ್.ಡಿ. ಲಮಾಣಿ ಅವರು ಪ್ರಸ್ತುತಪಡಿಸಿದ ಲಂಬಾಣಿ ಭಾಷೆಯ ಕವಿತೆಗಳು ಸೇರಿದ್ದ ಸಾಹಿತ್ಯಾಸಕ್ತರ ಮೆಚ್ಚುಗೆಗೆ ಪಾತ್ರವಾದವು.

> ಎಸ್.ಡಿ. ಲಮಾಣಿ ಅವರ ಕವನ ಲಂಬಾಣಿ ಜನಾಂಗದ ಇತಿಹಾಸವನ್ನೇ ಬಿಚ್ಚಿಟ್ಟಿದ್ದು ವಿಶೇಷವಾಗಿತ್ತು. ಶಿಗ್ಲಿಯ ಸೋಮಣ್ಣ ಡಾಣಗಲ್, ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಕದಳಿ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ, ಸುಮಿತ್ರ ಚೋಟಗಲ್ ಕವನ ವಾಚಿಸಿದರು.

ಅಧ್ಯಕ್ಷತೆ ವಹಿಸಿದ್ದ ಸೋಮೇಶ್ವರ ಭಕ್ತರ ಸೇವಾ ಸಮಿತಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ಲಕ್ಷ್ಮೇಶ್ವರದಲ್ಲಿ ಜರುಗಿದ ಬಹುಭಾಷಾ ಕವಿಗೋಷ್ಠಿ ವಿನೂತನ ಸಾಹಿತ್ತಿಕ ಕಾರ್ಯಕ್ರಮವಾಗಿದೆ. ಮೇಲಿಂದ ಮೇಲೆ ಸಾಹಿತ್ಯಕ್ಕೆ ಸಂಬಂಧಿಸಿದ ಇಂತಹ ಕಾರ್ಯಕ್ರಮಗಳು ನಡೆಯಲಿ ಎಂದ ಅವರು, ಕನ್ನಡ ಭಾಷೆಯೊಂದಿಗೆ ಎಲ್ಲ ಭಾಷೆಗಳನ್ನೂ ಪ್ರೀತಿಸಬೇಕು ಮತ್ತು ಬೇರೆ ಭಾಷೆಗಳ ಜ್ಞಾನವಿರಬೇಕು ಎಂಬುದನ್ನು ಈ ಕವಿಗೋಷ್ಠಿ ಸಾರಿದೆ ಎಂದರು.

ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ, ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ, ಅಶೋಕ ಸೊರಟೂರ ನಿರ್ವಹಿಸಿದರು.

## 'ಭಕ್ತಿಯ ವಿನಯಾಂಜಲಿ' ಕಾರ್ಯಕ್ರಮದಲ್ಲಿ ಆನಂದ ಬಸ್ತಿ ನುಡಿ

# ವಿದ್ಯಾಸಾಗರರು ಭಾರತ ಕಂಡ ಅಪರೂಪದ ಸಂತ



■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರಸಂತರೂ, ಅಹಿಂಸಾ ಧರ್ಮ ಪ್ರಭಾವಕರೂ ಆಗಿದ್ದ ಸಂತ ಶಿರೋಮಣಿ ಆಚಾರ್ಯ ಶ್ರೀ ವಿದ್ಯಾಸಾಗರ ಮಹಾರಾಜರು ಭಾರತ ಕಂಡ ಅಪರೂಪದ ಸಂತರಲ್ಲಿ ಒಬ್ಬರಾಗಿದ್ದರು ಎಂದು ಗದಗ ಜಿಲ್ಲಾ ದಿಗಂಬರ ಜೈನ್ ಸಮಾಜದ ಹಿರಿಯರಾದ ಆನಂದ ಎನ್.ಬಸ್ತಿ ಅಭಿಪ್ರಾಯಪಟ್ಟರು.

ಅವರು ಗದುಗಿನ ಪ್ರಕಾಶ ಮುತ್ತಿನ ಅವರ ಕಟ್ಟಡದಲ್ಲಿರುವ ಗದಗ ಜಿಲ್ಲಾ ದಿಗಂಬರ ಜೈನ್ ಸಂಘದ ಕಾರ್ಯಾಲದಲ್ಲಿ ಏರ್ಪಡಿಸಿದ್ದ ಆಚಾರ್ಯ ವಿದ್ಯಾಸಾಗರ ಮಹಾರಾಜರಿಗೆ 'ಭಕ್ತಿಯ ವಿನಯಾಂಜಲಿ' ಕಾರ್ಯಕ್ರಮದಲ್ಲಿ ಮಾತನಾಡಿದರು.

ಚಿಕ್ಕೋಡಿ-ಸದಲಗಾ ವಿದ್ಯಾಸಾಗರ ಮಹಾರಾಜರ ಜನ್ಮಭೂಮಿಯಾಗಿದ್ದರೂ ಅವರು ಕೋಶ ಓದಿ ದೇಶ ಸುತ್ತಿದ ಸಾಧಕರು. ಛತ್ತಿಸಗಡ ರಾಜ್ಯದ ಡೋಂಗರಗಡ ಚಂದ್ರಗಿರಿ ಜೈನ ತೀರ್ಥ ಪುಣ್ಯ ಕ್ಷೇತ್ರದಲ್ಲಿ ಸಲ್ಲೇಖನ ಪೂರ್ವಕ ಸಮಾಧಿ ಮರಣ ಸಾಧಿಸಿ ಇತ್ತಿಚೆಗೆ ಜಿನೈಕ್ಯರಾದರು.

ವಿದ್ಯಾಸಾಗರ ಮಹಾರಾಜರು ಧರ್ಮ, ಶಿಕ್ಷಣ, ಸಾಹಿತ್ಯ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿದ್ದಾರೆ. ಮಹಾರಾಜರು ಬರೆದ ಮೂಕಮಾಟಿ ಕಾವ್ಯದ ಮೇಲೆ ಸುಮಾರು 60ಕ್ಕೂ ಹೆಚ್ಚು ಜನರು ಪಿ.ಎಚ್.ಡಿ ಪದವಿ ಪಡೆದಿರುವದು ಒಂದು ಇತಿಹಾಸ ಎಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ದಿಗಂಬರ ಜೈನ್ ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ ಮಾತನಾಡಿ, ವಿದ್ಯಾಸಾಗರ ಮಹಾರಾಜರು ಹಾಕಿಕೊಟ್ಟ ಧರ್ಮ ಪರಂಪರೆ, ನೀತಿ, ತತ್ವ ಸಂದೇಶಗಳನ್ನು ನಾವಿಂದು ಪಾಲಿಸುವ ಮೂಲಕ ಅವರನ್ನು ಸದಾಕಾಲ ಸ್ಮರಿಸಬೇಕಿದೆ ಎಂದರು.

ಸಂಘದ ಕಾರ್ಯದರ್ಶಿ ಪ್ರಕಾಶ ಮುತ್ತಿನ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಕಪ್ಪ ನಾವಳ್ಳಿ ನಿರೂಪಿಸಿ ವಂದಿಸಿದರು. ಪಿ.ಜಿ. ನಾವಳ್ಳಿ, ವ್ಹಿ.ಎನ್. ದಾಕಪ್ಪನವರ, ಸಂತೋಷ ಕುಲಕರ್ಣಿ, ಎಂ.ಟಿ. ಕಬ್ಬಿಣ, ಅನಂತರಾಜ ಬಸ್ತಿ, ಆಕಾಶ ಮುತ್ತಿನ, ವಸಂತಮಾಲಾ ದೇಸಾಯಿ, ಸುಮನ್ ಮುತ್ತಿನ, ಪ್ರಾಚ್ಯವಸ್ತು ಸಂಶೋಧಕ ಅ.ದ. ಕಟ್ಟಿಮನಿ ಸೇರಿದಂತೆ ಗದಗ ಜಿಲ್ಲಾ ದಿಗಂಬರ ಜೈನ್ ಸಮಾಜ ಬಾಂಧವರು ಪಾಲ್ಗೊಂಡಿದ್ದರು.

# ಪಂಚ ಗ್ಯಾರಂಟಿ ಯೋಜನೆಗಳ ಸಮೀಕ್ಷೆ: ಗ್ಯಾರಂಟಿ ಸ್ವಯಂ ಸೇವಕರ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದಂತೆ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ವ್ಯಾಪ್ತಿ ಸಮೀಕ್ಷೆ ಕೈಗೊಳ್ಳಲು ಗ್ಯಾರಂಟಿ ಸ್ವಯಂ ಸೇವಕರನ್ನು ನೇಮಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸಿಬ್ಬಂದಿ ವರ್ಗ ಹಾಗೂ ಅಂಗನವಾಡಿ ಕಾರ್ಯಕರ್ತೆಯರನ್ನು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಮತ್ತು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ವ್ಯಾಪ್ತಿಯಲ್ಲಿ ಬರುವಂತಹ ಜಿಲ್ಲೆಯ ಎಲ್ಲ ಸ್ಥಳೀಯ ಸಂಸ್ಥೆಗಳಲ್ಲಿ ಕರವಸೂಲಿ ಸಹಾಯಕ ಸಿಬ್ಬಂದಿಗಳನ್ನು ಗ್ಯಾರಂಟಿ ಸ್ವಯಂ ಸೇವಕರನ್ನಾಗಿ ನೇಮಕ ಮಾಡಲಾಗಿದೆ.

ಪ್ರತಿ ಸೇವಕರು 120ರಿಂದ 150 ಮನೆಗಳ ಹಂಚಿಕೆ ಮಾಡಿಕೊಂಡು ಗ್ಯಾರಂಟಿ ಸಮೀಕ್ಷೆ ಕೈಗೊಳ್ಳಲು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆದೇಶಿಸಿದ್ದಾರೆ.

# ಸಾರ್ವತ್ರಿಕ ಚುನಾವಣೆ: ಆಯುಧ ಸ್ಕ್ರೀನಿಂಗ್ ಕಮಿಟಿ ರಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವತ್ರಿಕ ಚುನಾವಣೆಗಳು/ ಉಪ ಚುನಾವಣೆಗಳ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಜಿಲ್ಲಾ ವ್ಯಾಪ್ತಿಯಲ್ಲಿ ಆಯುಧಗಳ ಲೈಸನ್ಸ್ ಹೊಂದಿದವರು ತಮ್ಮ ಆಯುಧಗಳನ್ನು ಠೇವಣಿ ಮಾಡುವುದು ಹಾಗೂ ಠೇವಣಿ ಕುರಿತು ಪರಿಶೀಲನೆ ನಡೆಸಲು ಅಧಿಕಾರಿಗಳನ್ನೊಳಗೊಂಡ ಜಿಲ್ಲಾ ಆಯುಧ ಸ್ಕ್ರೀನಿಂಗ್ ಕಮಿಟಿ ರಚಿಸಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

## ಆತ್ಮಾ ಯೋಜನೆಯಡಿ ರೈತರ ತರಬೇತಿ ಕಾರ್ಯಕ್ರಮ । ಸಾವಯವ ಕೃಷಿಗೆ ಮರಳಲು ಸಲಹೆ

# ಮಣ್ಣಿನ ರಕ್ಷಣೆಗಾಗಿ ಸೂಕ್ತ ಬೇಸಾಯ ಅನುಸರಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮುಂದಿನ ಭವಿಷ್ಯಕ್ಕಾಗಿ ಮಣ್ಣಿನ ಗುಣಮಟ್ಟ ಕಾಪಾಡಿಕೊಳ್ಳುವುದು ಅಗತ್ಯವಾಗಿದೆ. ಇದಕ್ಕಾಗಿ ಸೂಕ್ತವಾದ ಬೇಸಾಯ ಪದ್ಧತಿಗಳನ್ನು ರೈತರು ಅಳವಡಿಸಿಕೊಳ್ಳಬೇಕು. ಅದರಲ್ಲೂ ಸಾವಯವ ಕೃಷಿ, ಸಾವಯವ ಗೊಬ್ಬರ ಬಳಕೆಗೆ ಮುಂದಾಗಬೇಕು ಎಂದು ಸಾವಯವ ಕೃಷಿಕ ವೀರೇಶ ನೇಗಲಿ ಹೇಳಿದರು.




ಆತ್ಮಾ ಯೋಜನೆಯಡಿ ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ವತಿಯಿಂದ ಸಮೀಪದ ಕೋಟುಮಚಗಿ ಗ್ರಾಮದ ಸಾವಯವ ಕೃಷಿಕ ವೀರೇಶ ನೇಗಲಿಯವರ ಸಾವಯವ ಕೃಷಿ ಘಟಕದಲ್ಲಿ ನಡೆದ ರೈತರ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೈತರು ಸಾವಯವ ಕೃಷಿ ಪದ್ಧತಿ ಅಥವಾ ಸಸ್ಯ ಶೇಷಗಳನ್ನು ಮಣ್ಣಿನಲ್ಲಿ ಸೇರಿಸುವ ವಿಧಾನ ಅನುಸರಿಸಬೇಕು. ದೇಸೀ ಆಕಳಿನ ಗೊಬ್ಬರ, ಗಂಜಲ ಸಂರಕ್ಷಿಸಿ ಅದನ್ನು ಉತ್ತಮ ಗುಣಮಟ್ಟದ ಗೊಬ್ಬರವನ್ನಾಗಿ ಪರಿವರ್ತಿಸಿ, ಹದಗೊಳಿಸಿ ನೇರವಾಗಿ ಮಣ್ಣೊಳಗೆ ಸೇರಿಸುವ ಕಾರ್ಯಕ್ಕೆ ಮುಂದಾದರೆ ಮಣ್ಣಿನ ಗುಣಮಟ್ಟ ಉತ್ತಮವಾಗಿರುತ್ತದೆ ಎಂದರು.

> ಭೂಮಿಯ ಮೇಲೆ ಮಣ್ಣು ಕೂಡಾ ಜೀವಂತವಾಗಿದೆ. ಮಣ್ಣಿನ ಮೇಲಿರುವ ಜೀವಗಳಿಗಿಂತ ಅದರೊಳಗಡೆ ಅತಿಹೆಚ್ಚು ಜೀವಿಗಳಿವೆ. ಬೆಳೆಯ ಉತ್ಪಾದಕತೆ ಹೆಚ್ಚಿಸಲು ಮಣ್ಣಿನಲ್ಲಿ ಇರುವ ಜೀವಿಗಳು ಬದುಕಿ ತಮ್ಮ ನಿತ್ಯದ ಚಟುವಟಿಕೆಗಳನ್ನು ನಡೆಸಬೇಕು. ಅದಕ್ಕಾಗಿ ರಾಸಾಯನಿಕ ಬಳಕೆ ಮಾಡಿ ಜೀವಿಗಳನ್ನು ಕೊಲ್ಲಲು ಮುಂದಾಗಬಾರದು ಎಂದು ವೀರೇಶ ನೇಗಲಿ ಸಲಹೆ ನೀಡಿದರು.

ಆತ್ಮಾ ಯೋಜನೆಯ ಕುಂದಗೋಳ ತಾಲೂಕು ತಾಂತ್ರಿಕ ವ್ಯವಸ್ಥಾಪಕಿ ಶ್ರೀದೇವಿ ಬಾಬು ಆಲೂರ ಮಾತನಾಡಿ, ಪ್ರಗತಿಪರ ರೈತರ ಜಮೀನುಗಳಿಗೆ ಪ್ರವಾಸ ಕೈಗೊಂಡು ಹೆಚ್ಚು ರೈತರು ಸಮಗ್ರ ಕೃಷಿಯಲ್ಲಿ ತೊಡಗಿಸಿಕೊಂಡು, ಅವರಿಂದ ಸ್ಫೂರ್ತಿ ಪಡೆದು ಇನ್ನೂ ಹೆಚ್ಚಿನ ಕೃಷಿ ಸಾಧನೆಗೆ ಮುಂದಾಗುವಂತೆ ಪ್ರೋತ್ಸಾಹಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಮಣ್ಣಿನಿಂದಲೇ ಜೀವನ ಆರಂಭವಾಗುತ್ತದೆ ಮತ್ತು ಅಂತ್ಯವಾಗುತ್ತದೆ. ರೈತರು ನಿಜವಾಗಿಯೂ ಮಣ್ಣಿನ ಮಕ್ಕಳು. ಮುಂದಿನ ಪೀಳಿಗೆಗೆ ಸುರಕ್ಷಿತವಾದ ಮಣ್ಣು ಕೊಡಬೇಕಿದೆ. ಮಣ್ಣಿನ ಫಲವತ್ತತೆ ಹಾಳಾದರೆ ಇಡೀ ಆಹಾರ ಜಾಲ ತೊಂದರೆಗೆ ಸಿಲುಕುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿವಪ್ಪ ನೇಗಲಿ, ಈರಪ್ಪ ಗೋದಿ, ಚನ್ನಬಸಪ್ಪ ಗೋದಿ, ಮಲ್ಲಪ್ಪ ಕಿತ್ತೂರ, ಶೇಖಪ್ಪ ನೀರಲಗಿ, ನಿಂಗಪ್ಪ ಕಿರಟಗೇರಿ ಇದ್ದರು.

# ಸೂರ್ಯನಮಸ್ಕಾರ ಸ್ಪರ್ಧೆಯಲ್ಲಿ ಗೆಲುವು




■ವಿಜಯಸಾಕ್ಷಿ ಸುದ್ದಿ, ಗದಗ

ಡಿಜಿಎಂ ಆಯುರ್ವೇದಿಕ್ ಮೆಡಿಕಲ್ ಕಾಲೇಜ ಗದಗ ಸಂಸ್ಥೆಯ ಸ್ವಸ್ಥ ವೃತ್ತ ವಿಭಾಗ ಮತ್ತು ಶಿವಾನಂದ ಯೋಗ ಕಾಲೇಜ ಗದಗ ಇವರುಗಳ ಸಹಯೋಗದಲ್ಲಿ ರಥಸಪ್ತಮಿ ಅಂಗವಾಗಿ ಇತ್ತೀಚೆಗೆ ನಡೆದ 108 ಸೂರ್ಯನಮಸ್ಕಾರ ಸ್ಪರ್ಧೆಯಲ್ಲಿ ಭಾಗವಹಿಸಿದ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ತಂಡವು ಪ್ರಶಸ್ತಿ ಸಹಿತ ಪ್ರೋತ್ಸಾಹ ಟ್ರೋಫಿ ಮತ್ತು ಪ್ರಶಸ್ತಿಪತ್ರ ಪಡೆದಿದೆ.

ಯೋಗಪಾಠಶಾಲೆಯ ತಂಡದಲ್ಲಿ ಡಾ. ಎಂ.ವಿ. ಐಹೊಳ್ಳಿ, ಕೆ.ಎಸ್. ಪಲ್ಲೇದ, ಚೇತನ ಚುಂಚಾ, ಅರುಣಾ ಇಂಗಳಳ್ಳಿ, ವೀಣಾ ಗೌಡರ, ಜಯಶ್ರೀ ದಾವಣಗೇರಿ, ಸುನಂದಾ ಜ್ಯಾನೋಪಂತರ, ಶಿವಾನಿ ಸೂರಪ್ಪಗೌಡರ, ಸುಧಾ ಪಾಟೀಲ, ಪೂರ್ಣಿಮಾ ಕಾಟಿಗ್ಗರ್ ಭಾಗವಹಿಸಿದ್ದರು. ವೈಯಕ್ತಿಕವಾಗಿ ಸುನಂದಾ ಜ್ಯಾನೋಪಂತರ, ಎಂ.ವಿ. ಐಹೊಳ್ಳಿ, ಕೆ.ಎಸ್. ಪಲ್ಲೇದ ಇವರು ಸ್ಪರ್ಧೆಯಲ್ಲಿ 108 ಸೂರ್ಯನಮಸ್ಕಾರ ಪ್ರದರ್ಶಿಸಿ ಪದಕ ಹಾಗೂ ಪ್ರಶಸ್ತಿಪತ್ರ ಪಡೆದಿದ್ದಾರೆ.

ಸ್ಪರ್ಧೆಯಲ್ಲಿ ಭಾಗವಹಿಸಿದ ಯೋಗಪಾಠಶಾಲೆ ತಂಡದ ಸದಸ್ಯರಿಗೆ, ವಿಜೇತರಾದ ಸ್ಪರ್ಧಿಗಳಿಗೆ ಹಾಗೂ ತರಬೇತುದಾರರಿಗೆಲ್ಲರಿಗೂ ಯೋಗಪಾಠಶಾಲೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗದ ಪರವಾಗಿ ಆಡಳಿತಾಧಿಕಾರಿಗಳಾದ ಎಸ್.ಎಸ್. ಪಟ್ಟಣಶೆಟ್ಟರ ಮತ್ತು ಯೋಗಪಾಠಶಾಲೆ ನಿರ್ದೇಶಕ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಮಾ.1ರಂದು ಸರ್ಕಾರಿ ನೌಕರರ ಕ್ರೀಡಾಕೂಟ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ , ಇವರ ಸಂಯುಕ್ತ ಆಶ್ರಯದಲ್ಲಿ 2023-24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ದೆಗಳ ಉದ್ಘಾಟನಾ ಸಮಾರಂಭವು ಮಾರ್ಚ್ 1 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರಾದ ಬಿ. ನಾಗೇಂದ್ರ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಹಕಾರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಎನ್. ಮಂಜುನಾಥ ಪ್ರಸಾದ, ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ವಾಣಿಜ್ಯ ತೆರಿಗೆ ಆಯುಕ್ತರಾದ ಶ್ರೀಮತಿ ಸಿ ಶಿಖಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಎನ್. ಶಶಿಕುಮಾರ್ , ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಆಗಮಿಸುವರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ರವಿ ಗುಂಜೀಕರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

# ರಾಜ್ಯಮಟ್ಟದ ಬ್ಯಾಕ್ ಸ್ಟ್ರೋಕ್ ಸ್ವಿಮ್ಮಿಂಗ್‌ನಲ್ಲಿ ಪ್ರಥಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಡಾ. ಜಿ.ಬಿ. ಬಿಡಿನಹಾಳ ಅವರು ಕಳೆದ ವಾರ ಶಿವಮೊಗ್ಗದಲ್ಲಿ ನಡೆದ ಆಯ್‌ಎಮ್‌ಎ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ಬ್ಯಾಕ್ ಸ್ಟ್ರೋಕ್ ಸ್ವಿಮ್ಮಿಂಗ್‌ನಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.




ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿ ಮಮಾತನಾಡಿದ ಡಾ. ಬಿಡಿನಹಾಳ, ನನ್ನ ಜೀವನದಲ್ಲಿ ನಾನು ಬಾಲ್ಯದ ನಂತರ ಒಂದು ದಿನವೂ ಸ್ವಿಮ್ಮಿಂಗ್ ಮಾಡಿಲ್ಲ. 58 ವರ್ಷಗಳ ನಂತರ ನೀರಿಗಿಳಿಯುವಾಗ ಬಾಲ್ಯದ ಸವಿನೆನಪುಗಳು ಮನದ ಮೂಲೆಯಲ್ಲಿ ಮಿಂಚಿನಂತೆ ಬಂದು ಹೋದವು. ಅವುಗಳ ಮೆಲುಕು ಹಾಕುತ್ತಲೇ ಪ್ರಥಮ ಸ್ಥಾನ ಪಡೆದಿದ್ದು ಅತೀವ ಖುಷಿ ತಂದಿದೆ ಎಂದರು.


ಇತ್ತೀಚೆಗೆ ಆಂಧ್ರಪ್ರದೇಶದಲ್ಲಿ ನಡೆದ ಡಾಕ್ಟರ್ಸ್ ಒಲಿಂಪಿಕ್ಸ್‌ನಲ್ಲಿ 4 ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದು, ಗದಗ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು 'ಕ್ರೀಡಾಶ್ರೀ' ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು.

ಡಾ. ಬಿಡಿನಹಾಳ ಅವರ ಈ ಸಾಧನೆಗೆ ಕಲಾಚೇತನ ಸಂಸ್ಥೆಯ ಕಾವೆಂಶ್ರೀ, ನಿವೃತ್ತ ಉಪನ್ಯಾಸಕರಾದ ಶರಣಬಸವ ವೆಂಕಟಾಪೂರ ಮತ್ತು ಅವರ ಆಸ್ಪತ್ರೆ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

# ವಿಶ್ವಕರ್ಮ ಸಮಾಜಕ್ಕೆ ಸ್ಥಾನಮಾನ: ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆ ಅಂಗೀಕಾರ ನೀಡಿತು. ಈ ವಿಧೇಯಕದ ಪ್ರಕಾರ ದೇವಸ್ಥಾನಗಳಿಂದ ಸಾಮಾನ್ಯ ಸಂಗ್ರಹಣಾ ನಿಧಿಯ ಮೊತ್ತ ಹೆಚ್ಚಿಸುವುದು ವ್ಯವಸ್ಥಪನಾ ಸಮಿತಿಯಲ್ಲಿ ಹಿಂದೂ ದೇವಾಲಯ ವಾಸ್ತುಶಿಲ್ಪ ಮತ್ತು ಶಿಲ್ಪ ಶಾಸ್ತ್ರದಲ್ಲಿ ಕೌಶಲವುಳ್ಳ ವಿಶ್ವಕರ್ಮ ಸಮಾಜದ ವ್ಯಕ್ತಿ ಸೇರ್ಪಡೆ ಅವಕಾಶ ಕಲ್ಪಿಸಿರುವುದು ನಮ್ಮ ಸಮಾಜದ ಧೀಮಂತ ನಾಯಕರು ನೀಡಿದ ಕೊಡುಗೆಯಾಗಿದೆ ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಗದಗ ಜಿಲ್ಲಾ ಘಟಕದ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ ಹೇಳಿಕೆ ನೀಡಿದ್ದಾರೆ.



ಈ ಬಗ್ಗೆ ಸರಕಾರದ ಗಮನ ಸೆಳೆದ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯ ಪ್ರಧಾನ ಕಾರ್ಯದರ್ಶಿ ಬ್ರಹ್ಮ ಗಣೇಶ್ ರಾಯಚೂರು, ಅಖಿಲ ಕರ್ನಾಟಕ ವಿಶ್ವಕರ್ಮ ಸಮಾಜದ ಎಲ್ಲಾ ಪದಾಧಿಕಾರಿಗಳು, ಸಮಾಜದ ರಾಜ್ಯಾಧ್ಯಕ್ಷ ಕೆ.ಪಿ. ನಂಜುಂಡಿ ಅವರಿಗೆ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಕ್ರಾಂತಿ ಸೇನಾ ಜಿಲ್ಲಾ ಮಹಿಳಾ ಸಂಘಟನೆ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ಗಂಗಾಪುರ ಪೇಟೆ ಓಣಿಯ ಶ್ರೀ ಬಾಲಮಾರುತಿ ದೇವಸ್ಥಾನದಲ್ಲಿ ಗದಗ ಜಿಲ್ಲಾ ಕ್ರಾಂತಿ ಸೇನಾ ಮಹಿಳಾ ಸಂಘಟನೆ ಉದ್ಘಾಟನೆಗೊಂಡಿತು.

ಇದೇ ಸಂದರ್ಭದಲ್ಲಿ ಕ್ರಾಂತಿ ಸೇನಾದ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಅಧ್ಯಕ್ಷತೆಯಲ್ಲಿ ಮಹಿಳಾ ಸಂಘಟನೆಯ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ರಾಣಿ ಚಂದಾವರಿ, ಉಪಾಧ್ಯಕ್ಷರಾಗಿ ಪೂಜಾ ಬೇವೂರ್, ಪದ್ಮಾ ಗುಜ್ಜಲ್, ಪ್ರಧಾನ ಕಾರ್ಯದರ್ಶಿಯಾಗಿ ನಿಖಿತಾ ಸುತಾರ, ಗೌ.ಕಾರ್ಯದರ್ಶಿಯಾಗಿ ರೇಣುಕಾ ಕಬಾಡಿ, ಕಾರ್ಯದರ್ಶಿಯಾಗಿ ನಿರ್ಮಲಾ ನಿರಂಜನ್, ಮಹಾನಂದ ಪತ್ತಾರ್, ಗೀತಾ ಬೆಳದಡಿ, ಕಾರ್ಯದರ್ಶಿ ರೇಣುಕಾ ಕಲ್ಬುರ್ಗಿ, ಖಜಾಂಚಿಯಾಗಿ ಅಕ್ಷತಾ ಪವಾರ ಆಯ್ಕೆಯಾದರು.

ಈ ಸಂದರ್ಭದಲ್ಲಿ ಮಾತನಾಡಿದ ಬಾಬು ಬಾಕಳೆ, ನಿಮ್ಮೆಲ್ಲರ ಸಹಕಾರದಿಂದ ಕ್ರಾಂತಿ ಸೇನಾ ಸಂಘಟನೆ ಇನ್ನಷ್ಟು ಬಲಿಷ್ಠವಾಗಲಿ ಎಂದರು.


ಕ್ರಾಂತಿ ಸೇನಾ ಪದಾಧಿಕಾರಿಗಳಾದ ಭೀಮಾ ಕಾಟಿಗರ್, ಪ್ರವೀಣ ಹಬೀಬ, ಶಂಕರ್ ಕಲಬುರ್ಗಿ, ರಾಮ, ವಿನೋದ, ರಾಮು ಕಬಾಡಿ, ಹಾವನೂರ, ಸರೋಜಾಬಾಯಿ ಟೀಕಣದಾರ್, ಶ್ರೀದೇವಿ ಕಬಾಡಿ, ಕೌಶಲ್ಯ ಪವಾರ ಹಾಗೂ ಪದಾಧಿಕಾರಿಗಳು ಹಾಜರಿದ್ದರು.

### ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನದಿಂದ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ

## ಪಂ.ಪುಟ್ಟರಾಜ ಕವಿ ಗವಾಯಿಗಳವರ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಡಿತ ಡಾ. ಪುಟ್ಟರಾಜ ಗವಾಯಿಗಳವರ 110ನೇ ಜಯಂತ್ಯುತ್ಸವದ ಅಂಗವಾಗಿ 68 ಸಾಧಕರಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮಾರ್ಚ್ 3, ರವಿವಾರ ಮುಂಜಾನೆ 10 ಗಂಟೆಗೆ ಇಲ್ಲಿನ ಕಳಸಾಪೂರ ರಸ್ತೆಯ ವೀಮಲೇಶ್ವರ ನಗರದ ಶ್ರೀರಾಮ ಬಂಜಾರ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.



ಸಮಾರಂಭದಲ್ಲಿ ಡಾ. ಪುಟ್ಟರಾಜ ಕವಿ ಗವಾಯಿಗಳವರ ಹೆಸರಿನಲ್ಲಿ ಒಟ್ಟು 68 ಜನ ಸಾಹಿತ್ಯ, ಸಂಗೀತ, ವೈದ್ಯ ಬ್ರಹ್ಮ, ಸಾಮಾಜಿಕ ಕೌಶಲ್ಯ, ಕಲಾಚೇತನ, ಜಾನಪದ ಗಂಗೋತ್ರಿ, ಆದರ್ಶ ದಂಪತಿಗಳು ಇಂತಹ ಸಾಧಕರನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಶ್ರೀ ವಿರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಡಾ. ಪರಮಪೂಜ್ಯಶ್ರೀ ಕಲ್ಲಯ್ಯಜ್ಜನವರು, ಸಮ್ಮುಖವನ್ನು ಶ್ರೀ ಮ.ಘ.ಪ್ರ. ಧರ್ಮರತ್ನ ಡಾ. ಕೈಲಾಸನಾಥ ಮಹಾಸ್ವಾಮಿಗಳು ಶೀಲವಂತ ಹಿರೇಮಠ ಕೊಲ್ಹಾರ ಜಿಲ್ಲಾ ವಿಜಯಪುರ ಇವರು ವಹಿಸಲಿದ್ದು, ಉದ್ಘಾಟನೆಯನ್ನು ಶ್ರೀ ಷ.ಬ್ರ. ಗುರುಶಾಂತವೀರ ಶಿವಾಚಾರ್ಯ ಮಹಾಸ್ವಾಮಿಗಳು ಭೂಕೈಲಾಸ ಮೇಲು ಗದ್ದುಗೆ ಸಂಸ್ಥಾನ ಹಿರೇಮಠ ಪುಣ್ಯಕ್ಷೇತ್ರ ಇಟಗಿ ಚಿಕ್ಕಮ್ಯಾಗೇರಿ ಇವರು ನೆರವೇರಿಸುವರು.

ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನದಿಂದ ಪ್ರತಿ ವರ್ಷದಂತೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರತಿಷ್ಠಾನದ ಅಧ್ಯಕ್ಷರಾದ ಡಾ. ವ್ಹಿ.ವ್ಹಿ. ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನಿರ್ದೇಶಕರಾದ ಡಾ. ಸತೀಶಕುಮಾರ ಎಸ್. ಹೊಸಮನಿ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಡಾ. ಬಿ.ಎಫ್. ದಂಡಿನ, ಕನ್ನಡ ಜಾನಪದ ಪರಿಷತ್ ಶಿರಹಟ್ಟಿಯ ಅಧ್ಯಕ್ಷ ಕೆ.ಎ. ಬಳಿಗಾರ, ಅಖಿಲ ಭಾರತ ಜಂಗಮ ಸಮಿತಿಯ ಜಿಲ್ಲಾಧ್ಯಕ್ಷ ಪ್ರಭುಸ್ವಾಮಿ ದಂಡಾವತಿಮಠ, ಪತ್ರಕರ್ತ ಡಾ. ಅನಂತ ಕಾರ್ಕಳ, ಗದಗ ಜಿಲ್ಲಾ ಬಂಜಾರ ಅಭಿವೃದ್ಧಿ ವೇದಿಕೆ ಅಧ್ಯಕ್ಷ ಡಾ. ಭೀಮಸಿಂಗ್ ರಾಠೋಡ, ಶ್ರೀ ವೀರೇಶ್ವರ ಪುಣ್ಯಾಶ್ರಮದ ಅನ್ನಪೂರ್ಣ ಬಸವರಾಜ ಹಿಡ್ಕಿಮಠ, ಪ್ರಮುಖರಾದ ಹೇಮಾಕ್ಷಿ ವ್ಹಿ.ಕಿರೇಸೂರ, ಆನಂದಯ್ಯ ದಾನಯ್ಯ ವಿರಕ್ತಮಠ, ಡಾ. ಸೌಭಾಗ್ಯ ಅಶೋಕ ಕೊಪ್ಪ, ಹೆಸ್ಕಾಂನ ಉಮೇಶ, ದಿನೇಶ ಎನ್.ದಾವಣಗೇರಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘವು ಬೆಂಗಳೂರಿನಲ್ಲಿ ಏರ್ಪಡಿಸಿದ್ದ ರಾಜ್ಯ ಸರ್ಕಾರಿ ನೌಕರರ ಮಹಾಸಮ್ಮೇಳನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ. ಎಸ್. ಷಡಕ್ಷರಿ, ರಾಜ್ಯ ಉಪಾಧ್ಯಕ್ಷರಾದ ರವಿ ಎಲ್ ಗುಂಜಿಕರ್ ಸೇರಿದಂತೆ ಹಲವರಿದ್ದರು.

### ಕಾಮಗಾರಿ ಸ್ಥಳ ವೀಕ್ಷಿಸಿದ ಇಒ ವಿಶ್ವನಾಥ ಹೊಸಮನಿ

## ಬೂದು ನೀರು ನಿರ್ವಹಣಾ ಕಾಮಗಾರಿ ಪರಿಶೀಲನೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಹಳ್ಳಿಗಳ ಕೊಳಚೆ ನೀರು ನದಿ ಹಾಗೂ ಜಲ ಮೂಲಗಳಿಗೆ ಸೇರುವ ಮುನ್ನ ಸಂಸ್ಕರಿಸಿ ಹರಿಸುವ ವಿನೂತನ ಬೂದು ನೀರು ನಿರ್ವಹಣಾ ವ್ಯವಸ್ಥೆಯನ್ನು ಡಂಬಳ ಗ್ರಾಮದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಕಾಮಗಾರಿ ಸ್ಥಳಗಳಿಗೆ ಮುಂಡರಗಿ ತಾಲೂಕಾ ಪಂಚಾಯತ ಇಒ ವಿಶ್ವನಾಥ ಹೊಸಮನಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಡಂಬಳ ಗ್ರಾಮದಲ್ಲಿ ತಾ.ಪಂ ವತಿಯಿಂದ ವಿನೂತನವಾಗಿ ಸುಸ್ಥಿರ ಬೂದು ನಿರ್ವಹಣೆಗೆ ಮೊದಲ ಹೆಜ್ಜೆಯಾಗಿ ರೋಣ ಮತಕ್ಷೇತ್ರದ ಡಂಬಳ ಗ್ರಾಮದಲ್ಲಿ 20 ಲಕ್ಷ ರೂ.ಗಳಲ್ಲಿ ಕೈಗೊಂಡಿರುವ ಕಾಮಗಾರಿಯನ್ನು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರದ 5 ಲಕ್ಷ ರೂ ಕಂಪೌಡ್ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಡಂಬಳ ಮತ್ತು ಡೋಣಿ ಗ್ರಾಮಗಳಲ್ಲಿ ಬೂದು ಮುಕ್ತ ಗ್ರಾಮಗಳನ್ನಾಗಿಸುವ ನಿಟ್ಟಿನಲ್ಲಿ ಕಾಮಗಾರಿಗಳನ್ನು ಹಂತ ಹಂತವಾಗಿ ಹಮ್ಮಿಕೊಳ್ಳಲಾಗುತ್ತಿದ್ದು ಡಂಬಳದಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ನದಿಯ ನೀರು ವಿಷಮುಕ್ತಗೊಳಿಸುವ ನಿಟ್ಟಿನಲ್ಲಿ ಗ್ರಾಮಗಳಲ್ಲಿ ಪಾತ್ರೆ, ಬಟ್ಟೆ ತೊಳೆದ ನೀರು, ಬಚ್ಚಲು ನೀರು ಸರಾಗವಾಗಿ ಹರಿದು ಹೋಗುವಂತೆ ಚರಂಡಿ ನಿರ್ಮಾಣ ಮಾಡಲಾಗಿದೆ. ಸಿಮೆಂಟ್ ಕಾಲುವೆಗಳಲ್ಲಿ ನೀರು ಹರಿದು ಈ ಕಾಲುವೆಗೆ ಸಂಪರ್ಕ ಹೊಂದುವಂತೆ ಕೆಳಹಂತದಲ್ಲಿಯೇ ಕಲ್ಲಿನಿಂದ ನಿರ್ಮಾಣ ಮಾಡಿದ ಚರಂಡಿ ಮೂಲಕ ಹರಿದು ಸಂಸ್ಕರಣೆಗೊಳ್ಳುತ್ತದೆ. ನಂತರ ಈ ತೊಟ್ಟಿಯಿಂದ ನೀರು ಸೇರುವ ಮುನ್ನವೇ ತ್ಯಾಜ್ಯವನ್ನು ವೈಜ್ಞಾನಿಕ ಮತ್ತು ತಾಂತ್ರಿಕ ಮಾದರಿಯಲ್ಲಿ ಸಂಸ್ಕರಿಸಿ ನೀರು ನದಿ ಸೇರದೆ, ಜಲಮೂಲಗಳಿಗೆ ಸೇರುವಂತೆ ಯೋಜನೆಯನ್ನು ವಿನ್ಯಾಸ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪಿಆರ್‌ಡಿ ಸಹಾಯಕ ಅಭಿಯಂತರ ಮಂಜುನಾಥ ಕಲಬುರ್ಗಿ, ತಾಂತ್ರಿಕ ಸಂಯೋಜಕ ಹರೀಶ ಸೊಬರದ, ಎನ್‌ಆರ್‌ಜಿ ತಾಂತ್ರಿಕ ಸಹಾಯಕ ಆಂಜನೆಯ ಬಿ, ಡಂಬಳ ಗ್ರಾ.ಪಂ ಪಿಡಿಒ ಶಶಿಧರ ಹೊಂಬಳ ಹಾಗೂ ಗ್ರಾ.ಪಂ ಸಿಬ್ಬಂದಿ ವರ್ಗದವರಿದ್ದರು.

### ನಿಧನ ವಾರ್ತೆ

## ಕಳಕಮ್ಮ ಸಂಗನಬಸಪ್ಪ ಕೊರ್ಲಹಳ್ಳಿ

ಡಂಬಳ: ಗ್ರಾಮದ ಹಾಲುಮತ ಸಮಾಜದ ಹಿರಿಯರಾದ ಕಳಕಮ್ಮ ಸಂಗನಬಸಪ್ಪ ಕೊರ್ಲಹಳ್ಳಿ (85) ಸೋಮವಾರ ನಿಧನರಾದರು. ಪತ್ರಕರ್ತ ಗೋಣಿಬಸಪ್ಪ ಎಸ್. ಕೊರ್ಲಹಳ್ಳಿ ಸೇರಿದಂತೆ ಮೂವರು ಪುತ್ರರು, ಇಬ್ಬರು ಪುತ್ರಿಯರು, ಸೊಸೆಯಂದಿರು, ಮೊಮ್ಮಕ್ಕಳು, ಅಪಾರ ಬಂಧುಬಳಗ ಇದ್ದಾರೆ.



ಸಂತಾಪ: ಡಾ.ಜಗದ್ಗುರು ತೋಂಟದ ಸಿದ್ಧರಾಮ ಶ್ರೀಗಳು, ಭೈರನಹಟ್ಟಿಯ ಶಿರೋಳದ ತೆ-ೂಂಟದಾರ್ಯ ಶಾಕಾಮಠದ ಶಾಂತಲಿಂಗ ಶ್ರೀಗಳು, ನಂದಿವೇರಿ ಮಠದ ಶಿವಕುಮಾರ ಶ್ರೀಗಳು, ಗುಮ್ಮಗೋಳದ ಗೋಣಿಬಸವಶ್ವರ ಶ್ರೀ, ಜಿ.ವಿ. ಹಿರೇಮಠ, ಎಸ್. ಎಸ್. ಪಟ್ಟಣಶೆಟ್ಟರ, ವಾಯ್.ಎನ್. ಗೌಡರ, ಮಿಥುನ ಜಿ.ಪಾಟೀಲ್, ಶಿವಕುಮಾರಗೌಡ ಎಸ್.ಪಾಟೀಲ್, ವೀರಣ್ಣ ನಾಡಗೌಡರ, ವಿ.ಟಿ. ಮೇಟಿ, ವಿ.ಎಸ್. ಯರಾಶಿ, ಬೀರಪ್ಪ ಬಂಡಿ, ಮಹೇಶ ಗಡಗಿ, ವೆ.ಮೂ ಎಸ್.ಜಿ. ಗುರವಿನ, ಮುತ್ತಣ್ಣ ಹಿರೇಮಠ, ಅಬ್ದುಲಸಾಬ ಕಲಕೇರಿ, ರವಿ ಕರಿಗಾರ, ಡಿ.ಡಿ. ಮೋರನಾಳ, ಪ್ರಕಾಶ ಸಂಕಣ್ಣವರ, ಮರಿಯಪ್ಪ ಸಿದ್ದಣ್ಣವರ, ಪುಲಕೇಶಗೌಡ ಪಾಟೀಲ್, ಆನಂದಗೌಡ ಪಾಟೀಲ್, ರವಿಕಾಂತ ಅಂಗಡಿ, ಸುರೇಶ ಕುಂಬಾರ, ಬಶೀರಹಮ್ಮ ತಾಂಬೋಟಿ, ಶೇಕಣ್ಣ ಜುಟ್ಟಲನ್ನವರ, ಗೌಸಿದ್ದಪ್ಪ ಬಿಸನಳ್ಳಿ, ಬಸವರಡ್ಡಿ ಬಂಡಿಹಾಳ, ಕೆ.ಕೆ. ಬಂಡಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಹಿರಿಯರು ಸಂತಾಪ ಸೂಚಿಸಿದ್ದಾರೆ.

### ಕೂಡ್ಲಿಗೆರೆಯಲ್ಲಿ ಇಷ್ಟಲಿಂಗ ಮಹಾಪೂಜ, ಧರ್ಮ ಜಾಗೃತಿ ಸಮಾರಂಭ

## ಆಧ್ಯಾತ್ಮ ಚಿಂತನೆಯಿಂದ ಬಾಳಿಗೆ ನೆಮ್ಮದಿ

■ವಿಜಯಸಾಕ್ಷಿ ಸುದ್ದಿ, ಭದ್ರಾವತಿ

ಭಾರತ ದೇಶ ಧರ್ಮ ಪ್ರಧಾನವಾದ ದೇಶ. ಇಲ್ಲಿರುವ ಸಂಸ್ಕೃತಿ, ಪರಂಪರೆ, ಆದರ್ಶಗಳು ಇನ್ನಿತರರಿಗೂ ಮಾದರಿಯಾಗಿವೆ. ಆಧ್ಯಾತ್ಮ ಚಿಂತನೆಯಿಂದ ಬಾಳಿನಲ್ಲಿ ನೆಮ್ಮದಿ, ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.




ಅವರು ಮಂಗಳವಾರ ತಾಲೂಕಿನ ಕೂಡ್ಲಿಗೆರೆ ಗ್ರಾಮದಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವಿಜ್ಞಾನಕ್ಕೂ ಸಿಲುಕದೇ ಇರುವ ಅವ್ಯಕ್ತ ಶಕ್ತಿಯೇ ದೇವರು. ದೇವನೊಬ್ಬ ನಾಮ ಹಲವು. ಯಾವ ಹೆಸರಿನಿಂದ ಪ್ರಾರ್ಥಿಸಿ ಪೂಜಿಸಿದರೂ ಓಗೊಡುವ ಪರಮಾತ್ಮ ಒಬ್ಬನೇ ಎಂಬ ಸತ್ಯ ಅರಿತಾಗ ಸಮಾಜದಲ್ಲಿ ಜಾತಿ ಸಂಘರ್ಷಗಳು ನಡೆಯಲಾರವು. ದೇವರು ಮತ್ತು ಮರಣವನ್ನು ಯಾರೂ ಮರೆಯಬಾರದು. ನಾವು ಮಾಡಿದ ಉಪಕಾರ, ಪರರು ಮಾಡಿದ ಅಪಕಾರ ಮರೆತರೆ ಬದುಕು ಶಕ್ತಿಯುತಗೊಳ್ಳಲು ಸಾಧ್ಯ. ಧರ್ಮ, ದೇವರು, ಜಾತಿ ಮತ್ತು ಪ್ರಾಂತೀಯ ಹೆಸರಿನಲ್ಲಿ ನಡೆಯುವ ಸಂಘರ್ಷಗಳು ಮಾನವನ ಶ್ರೇಯಸ್ಸಿಗೆ ಅಡ್ಡಿಯಾಗುತ್ತವೆ ಎಂದರು.

ಧರ್ಮ ಮತ್ತು ವ್ಯಕ್ತಿ ಮಧ್ಯೆ ಗೋಡೆ ನಿರ್ಮಿಸದೇ ಸೇತುವೆ ನಿರ್ಮಿಸುವ ಕೆಲಸ ಎಲ್ಲೆಡೆ ಆಗಬೇಕಾಗಿದೆ. ವೀರಶೈವ ಧರ್ಮದಲ್ಲಿ ವಿಶ್ವಬಂಧುತ್ವದ ಆದರ್ಶ ಮೌಲ್ಯಗಳನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಮಹಾಮುನಿ ಅಗಸ್ತ್ಯರಿಗೆ ಬೋಧೆ ಮಾಡುವಾಗ ಸ್ಪಷ್ಟವಾಗಿ ಹೇಳಿದ್ದಾರೆ. ಸತ್ಯಂ ವಧ ಧರ್ಮಂ ಚರ ಎಂದಿದೆ ಶಾಸ್ತ್ರ. ಸತ್ಯವನ್ನು ಯಾವಾಗಲೂ ಮಾತನಾಡಬೇಕು. ಧರ್ಮದ ನಡೆಯಂತೆ ಜೀವನ ಇರಬೇಕಾಗುತ್ತದೆ. ಜ್ಞಾನ ಕ್ರಿಯಾತ್ಮಕವಾದ ವೀರಶೈವ ಧರ್ಮ ಸಾಮಾಜಿಕ ಮೌಲ್ಯಗಳನ್ನು ಎತ್ತಿ ಹಿಡಿದಿದೆ ಎಂದು ರಂಭಾಪುರಿ ಶ್ರೀಗಳು ತಿಳಿಸಿದರು.

ಮಳಲಿ ಮಠದ ಡಾ. ನಾಗಭೂಷಣ ಶ್ರೀಗಳು, ಬಿಳಕಿ ರಾಚೋಟೇಶ್ವರ ಶ್ರೀಗಳು, ಹುಣಸಘಟ್ಟ ಗುರುಮೂರ್ತಿ ಶ್ರೀಗಳು, ಸಿದ್ದರಬೆಟ್ಟದ ವೀರಭದ್ರ ಶ್ರೀಗಳು, ಚನ್ನಗಿರಿ ಕೇದಾರ ಶಿವಶಾಂತವೀರ ಶ್ರೀಗಳು, ಬೀರೂರು ಬಾಳೆಹೊನ್ನೂರು ಮಠದ ರುದ್ರಮುನಿ ಶ್ರೀಗಳು ಉಪಸ್ಥಿತರಿದ್ದರು.

ಅನ್ನದಾಸೋಹ ಸೇವೆ ಸಲ್ಲಿಸಿದ ಹೆಸರಾಂತ ಲೆಕ್ಕಪರಿಶೋಧಕ ಸದಾಶಿವಪ್ಪ ಮತ್ತು ಲಿಂ.ನಾಗರಾಜು ಧರ್ಮಪತ್ನಿ ಮಮತಾ ನಾಗರಾಜ ಮತ್ತು ಮಕ್ಕಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗೌರವ ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಸಮಾರಂಭದ ನೇತೃತ್ವವನ್ನು ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ವಹಿಸಿ ಮಾತನಾಡಿದರು. ಹಲವಾರು ಸಂಘ-ಸಂಸ್ಥೆ ಮತ್ತು ದಾನಿಗಳಿಗೆ ಶ್ರೀ ಜಗದ್ಗುರುಗಳಿಂದ ಗುರುರಕ್ಷೆ ನೆರವೇರಿತು. ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ಇದೇ ಸಂದರ್ಭದಲ್ಲಿ ಕೂಡ್ಲಿಗೆರೆ ಗ್ರಾಮಸ್ಥರು ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಗೌರವ ಸಮರ್ಪಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳು ಜನಕಲ್ಯಾಣಕ್ಕಾಗಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿದರು. ಸಹಸ್ರಾರು ಭಕ್ತರಿಗೆ ಅನ್ನದಾಸೋಹ ನೆರವೇರಿತು.

### ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಗುರುಪ್ರತಿಪದೆ ಉತ್ಸವದ ನಿಮಿತ್ತ ಪ್ರತಿಭಾ ಪುರಸ್ಕಾರ

## ದತ್ತಾತ್ರೇಯರ ಅನುಗ್ರಹದಿಂದ ಪುಣ್ಯ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದತ್ತಾತ್ರೇಯರು ನರೇಗಲ್ಲಿನಲ್ಲಿ ನೆಲೆಸಿರುವುದು ನಮ್ಮೆಲ್ಲರ ಭಾಗ್ಯ. ಪ್ರತಿನಿತ್ಯ ಗುರು ದತ್ತ ಸೇವೆ ಮಾಡುವುದರಿಂದ ಪುಣ್ಯ ಪ್ರಾಪ್ತಿ ಲಭಿಸುತ್ತದೆ ಎಂದು ಬೆಂಗಳೂರಿನ ಸಿಪಿಐ ಡಾ. ಅನಿಲ ಗ್ರಾಮಪುರೋಹಿತ ಹೇಳಿದರು.



ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ 114ನೇ ಗುರುಪ್ರತಿಪದೆ ಉತ್ಸವದ ನಿಮಿತ್ತ ನಡೆದ ಪ್ರತಿಭಾ ಪುರಸ್ಕಾರ, ನಿವೃತ್ತರಿಗೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಪ್ರತಿನಿತ್ಯ ಯಾವುದಾದರೂ ಒಂದು ಮಂತ್ರ ಪಠಿಸಬೇಕು. ಮಂತ್ರ ಪಠಿಸುವುದರಿಂದ ಮನಸ್ಸಿಗೆ ಶಾಂತಿ-ಸಮಾಧಾನ ಲಭಿಸುತ್ತದೆ. ಪ್ರತಿಯೊಬ್ಬರೂ ಎಲ್ಲ ಮಂತ್ರಗಳನ್ನು ಕಲಿಯಬೇಕು. ದತ್ತಾತ್ರೇಯರ ಆಶೀರ್ವಾದದಿಂದ ನನಗೆ 2023-24ನೇ ಸಾಲಿನ ರಾಷ್ಟ್ರಪತಿಗಳ ಸೇವಾ ಪದಕ ಲಭಿಸಿದೆ. ನಮ್ಮ ಊರಿನಲ್ಲಿಯೇ ನನಗೆ ದತ್ತನ ಆಶೀರ್ವಾದ ರೂಪದ ಸನ್ಮಾನ ಸ್ವೀಕರಿಸಲು ಸಂತೋಷವಾಗುತ್ತಿದೆ ಎಂದರು.

ಐಎಫ್‌ಎಸ್ ಮಹೇಶ ಶಿರೂರ ಮಾತನಾಡಿ, 114 ವರ್ಷಗಳ ಕಾಲ ನಿರಂತರವಾಗಿ ಶ್ರೀ ಗುರುಪ್ರತಿಪದೆ ಉತ್ಸವವನ್ನು ಮಾಡುತ್ತ ಬಂದಿರುವುದು ಸಂತೋಷದ ಸಂಗತಿ. ವಿದ್ಯಾರ್ಥಿಗಳು ಕಷ್ಟಪಟ್ಟು ಓದದೇ ಇಷ್ಟಪಟ್ಟು ಓದಿದರೆ ಗುರಿ ತಲುಪಲು ಸಾಧ್ಯವಾಗುತ್ತದೆ. ಮುಂದೆ ಉನ್ನತ ಸ್ಥಾನ ಪಡೆದು ನಿಮ್ಮ ತಂದೆ-ತಾಯಿಯರಿಗೆ ಹಾಗೂ ನಿಮ್ಮ ಊರಿಗೆ ಕೀರ್ತಿ ತರುವಂತಾಗಬೇಕು ಎಂದರು.

ಆಕಾಶವಾಣಿ ಕಲಾವಿದ ವೆಂಕಟೇಶ ಕುಲಕರ್ಣಿ ಅವರಿಂದ ಸಂಗೀತ ಸೇವೆ ಜರುಗಿತು. ಪ್ರತಿಭಾ ಪುರಸ್ಕಾರ, ನಿವೃತ್ತರಿಗೆ, ಸಿಪಿಐ ಡಾ. ಅನಿಲ ಗ್ರಾಮಪುರೋಹಿತ, ಐಎಫ್‌ಎಸ್ ಮಹೇಶ ಶಿರೂರರಿಗೆ ಸನ್ಮಾನ ಜರುಗಿತು.

ದತ್ತಭಕ್ತ ಮಂಡಳಿ ಅಧ್ಯಕ್ಷ ಸಂಜೀವ ಕುಲಕರ್ಣಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೇ.ಮೂ. ಶ್ರೀವಲ್ಲಭಶಾಸ್ತ್ರಿ ಸದರಜೋಶಿ, ಅರುಣ ಗ್ರಾಮಪುರೋಹಿತ, ಎ.ಜಿ. ಕುಲಕರ್ಣಿ, ಎಸ್.ಎಚ್. ಕುಲಕರ್ಣಿ, ಅರುಣ ಕುಲಕರ್ಣಿ, ಡಾ. ಎನ್. ಎಲ್. ಗ್ರಾಮಪುರೋಹಿತ, ಪ್ರಕಾಶ ಕುಲಕರ್ಣಿ, ವಿಶ್ವನಾಥ ಗ್ರಾಮಪುರೋಹಿತ, ಕೆ.ಬಿ. ದೇಸಾಯಿ, ಮಂಜುನಾಥ ಗ್ರಾಮಪುರೋಹಿತ, ಕೃಷ್ಣಾ ಗ್ರಾಮಪುರೋಹಿತ, ಆನಂದ ಕುಲಕರ್ಣಿ, ರಾಮಚಂದ್ರ ಕುಲಕರ್ಣಿ, ಆದರ್ಶ ಕುಲಕರ್ಣಿ, ರಾಜೀವ ಕುಲಕರ್ಣಿ, ಸುನೀಲ ಅಂಬೇಕರ್, ಹರೀಶ ಕುಲಕರ್ಣಿ, ಮಣಿಕಂಠ ಕುಲಕರ್ಣಿ ಮುಂತಾದವರಿದ್ದರು. ಅಕ್ಷಯ ಕುಲರ್ಣಿ ನಿರ್ವಹಿಸಿದರು.

## ಫಲಾನುಭವಿಗಳಿಗೆ ನಿವೇಶನ ಹಸ್ತಾಂತರ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಳೆದ 20 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಇಲ್ಲಿಯ ಮಾರುತಿ ನಗರದ ರಿ.ಸ ನಂ 294/4ರ ಜಮೀನಿನಲ್ಲಿ ರಚನೆ ಮಾಡಿದ 30*40 ಅಳತೆಯ ಆಶ್ರಯ ಯೋಜನೆಯ ನಿವೇಶನಗಳನ್ನು ಗ್ರಾಮ ಸಭೆಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಹಸ್ತಾಂತರ ಮಾಡಲಾಯಿತು.



ನಿವೇಶನವನ್ನು ಹಸ್ತಾಂತರ ಮಾಡಿದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಹಲವಾರು ವರ್ಷಗಳಿಂದ ಹಲವು ಸಮಸ್ಯೆಗಳಿಂದ ನಿವೇಶನ ಹಂಚಿಕೆ ನೆನೆಗುದಿಗೆ ಬಿದ್ದಿತ್ತು. ಬಡವರಿಗೆ ನಿವೇಶನ ಹಂಚಿಕೆ ಮಾಡುವ ಇಂದು ಕಾಲ ಕೂಡಿ ಬಂದಿದೆ. ಶೀಘ್ರವಾಗಿ ಈ ಪ್ರದೇಶಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಅಭಿವೃದ್ಧಿಪಡಿಸಲಾಗುವುದು. ಈ ನಿವೇಶನವನ್ನು ಒದಗಿಸಲು ಕಳೆದ 20 ವರ್ಷಗಳಿಂದ ಶ್ರಮಿಸಿದ ಸಚಿವರು, ಶಾಸಕರು, ಜಿ.ಪಂ/ತಾ.ಪಂ ಮಾಜಿ ಸದಸ್ಯರು, ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ 38 ಹಕ್ಕುಪತ್ರಗಳನ್ನು ವಿತರಿಸಲಾಯಿತು.


ಫಲಾನುಭವಿ ನಾಗಮ್ಮ ಹಾಲಿನವರ ಮಾತನಾಡಿ, ಕಳೆದ ಐದು ವರ್ಷಗಳಿಂದ ನಡೆಸಿದ ಹೋರಾಟಕ್ಕೆ ಇಂದು ಯಶ ಸಿಕ್ಕಿದೆ. ಉಳಿದ ಕೆಲವು ಫಲಾನುಭವಿಗಳಿಗೆ ಶೀಘ್ರವೇ ಹಕ್ಕುಪತ್ರ ದೊರಕಿಸಿಕೊಡಬೇಕು. ರಸ್ತೆ, ಕುಡಿಯುವ ನೀರು, ವಿದ್ಯುತ್ ಒದಗಿಸುವ ಕಾಮಗಾರಿ ಮಾಡಬೇಕೆಂದು ವಿನಂತಿಸಿಕೊಂಡರು.

ಗ್ರಾ.ಪಂ ಸದಸ್ಯರಾದ ಪೀರಸಾಬ ನದಾಫ, ಕುಬೇರಪ್ಪ ಬೆಂತೂರ, ಲಲಿತಾ ಗದಗಿನ ಮಾತನಾಡಿದರು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಪಿ.ಡಿ.ಒ ರಾಜಕುಮಾರ ಭಜಂತ್ರಿ, ಕಾರ್ಯದರ್ಶಿ ಪ್ರದೀಪ ಆಲೂರ, ಲೆಕ್ಕ ಸಹಾಯಕ ತುಕಾರಾಮ ಹುಲಗಣ್ಣವರ, ತಾ.ಪಂ ವಸತಿ ನೋಡೆಲ್ ಅಧಿಕಾರಿ ಹನುಮಂತಪ್ಪ ದಾಸರ, ಗ್ರಾ.ಪಂ ಸದಸ್ಯರು ಹಾಜರಿದ್ದರು.

## ಬಿಜೆಪಿಯಿಂದ ಎಸ್‌ಎಸ್‌ಕೆ ಸಮಾಜಕ್ಕೆ ಕೊಡುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಎಸ್.ಕೆ. ಸಮಾಜದ ಹಿರಿಯರಾದ ನಾರಾಯಣಸಾ ಭಾಂಡಗೆಯವರು ಜನಸಂಘದ ಕಾರ್ಯಕರ್ತರಾಗಿ, ಬಿಜೆಪಿ ಹಲವಾರು ಜವಾಬ್ದಾರಿಯನ್ನು ನಿರ್ವಹಿಸಿ ಬಿಜೆಪಿ ಹಿರಿಯರಾದ ವಾಜಪೇಯಿ, ಅಡ್ವಾನಿ, ಜಗನ್ನಾಥರಾವ ಜೋಶಿ, ಜರತಾರಘರ, ಅನಂತಕುಮಾರ, ಬಿ.ಎಸ್. ಯಡಿಯೂರಪ್ಪ ಮತ್ತು ಹಲವಾರು ನಾಯಕರೊಂದಿಗೆ ಪಕ್ಷದ ಸಂಘಟನೆಯಲ್ಲಿ ತಮ್ಮನ್ನು ತಾವು ಸಕ್ರಿಯವಾಗಿ ತೊಡಗಿಸಿಕೊಂಡು ಉತ್ತುಂಗದ ನಾಯಕರಾಗಿ ಬೆಳೆದಿದ್ದು, ರಾಜ್ಯ ಬಿಜೆಪಿ ಉಪಾಧ್ಯಕ್ಷರಾಗಿ, ವಿಧಾನಪರಿಷತ್ತ ಸದಸ್ಯರಾಗಿ ಇಂದು ರಾಜ್ಯಸಭೆಗೆ ಆಯ್ಕೆಯಾಗಿದ್ದು ಸಮಸ್ತ ಎಸ್.ಕೆ.ಎಸ್. ಸಮಾಜಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ನಗರ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ ಎನ್.ಹಬೀಬ ಸಂತಸ ವ್ಯಕ್ತಪಡಿಸಿದ್ದಾರೆ.



ರಾಜ್ಯಸಭೆಗೆ ಆಯ್ಕೆ ಮಾಡಿದ ಪ್ರಧಾನಿಮಂತ್ರಿ ನರೇಂದ್ರ ಮೋದಿ, ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಅಮಿತ್ ಶಾ, ಬಿ.ಎಸ್. ಯಡಿಯೂರಪ್ಪ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರರವರಿಗೆ ಹಾಗೂ ಎಲ್ಲ ಶಾಸಕರಿಗೆ ಸಮಸ್ತ ಎಸ್. ಎಸ್.ಕೆ. ಸಮಾಜದ ಪರವಾಗಿ ಹಾರ್ದಿಕ ಅಭಿನಂದನೆಗಳನ್ನು ತಿಳಿಸಿದ್ದಾರೆ.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಅಭಿಯಂತರರವರ ಕಛೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಸಿಂಗಟಾಲೂರು ಏತ ನೀರಾವರಿ ಯೋಜನೆ, ವಿಭಾಗ ನಂ.1, ಮುಂಡರಗಿ, ಗದಗ ಜಿಲ್ಲೆ.
Ph. No. 08371-295016 e-mail: eeslis1mdg@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ.**

**(ONLY THROUGH "e-Procurement" SYSTEM)**

ಉಲ್ಲೇಖ: 1. ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ: 1999/2023-24 ದಿನಾಂಕ:22.02.2024

ಸಿಂಗಟಾಲೂರು ಏತ ನೀರಾವರಿ ಯೋಜನೆಯಿಂದ ಬಾಧಿತವಾದ ಮುಂಡರಗಿ ತಾಲೂಕು ವಿಠ್ಠಲಾಪುರ ಗ್ರಾಮದ ಖಾಸಗಿ ಕಟ್ಟಡಗಳು ಹಾಗೂ ಖುಲ್ಲಾ ಜಾಗಗಳನ್ನು ಭೂಸ್ವಾಧೀನಕ್ಕೆ ಒಳಪಡಿಸುವ ಸಲುವಾಗಿ, ಅವುಗಳ ಮೌಲ್ಯಮಾಪನ ಮಾಡಿ ವಿಡಿಯೋಗ್ರಾಫಿ ಹಾಗೂ ಛಾಯಾಚಿತ್ರಗಳ ಸಮೇತ ವರದಿಯನ್ನು ತಯಾರಿಸಿ ಸಲ್ಲಿಸಲು Consultancy ಸೇವೆ ಪಡೆಯುವ ಕಾಮಗಾರಿಗೆ ಉಲ್ಲೇಖ(1)ರಂತೆ ಅಲ್ಪಾವಧಿ ಟೆಂಡರ್ ಪ್ರಕಟಣೆಯಲ್ಲಿ ಸೂಚಿಸಿರುವಂತೆ, ಅರ್ಹ ಗುತ್ತಿಗೆದಾರರಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ (Work Indent No. 936) ಟೆಂಡರನ್ನು ಆಹ್ವಾನಿಸಲಾಗಿದೆ. ಅದರಂತೆ, ಸದರಿ ಕಾಮಗಾರಿಯ ಟೆಂಡರ್‌ಗೆ ಇಟ್ಟ ಮೊತ್ತವು (ಜಿ.ಎಸ್.ಟಿ. ಸೇರಿ) ರೂ. 29.58 ಲಕ್ಷ ಆಗಿರುತ್ತದೆ ಹಾಗೂ ಈ ಕಾಮಗಾರಿಗೆ ಇ.ಎಂ.ಡಿ. ಮೊತ್ತವು ರೂ.59000/- ಆಗಿರುತ್ತದೆ.

ಇನ್ನುಳಿದಂತೆ, ಸದರಿ ಟೆಂಡರಿಗೆ ಸಂಬಂಧಿಸಿದ ಷರತ್ತು/ನಿಯಮಾವಳಿಗಳ ಮಾಹಿತಿಯನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಹಾಗೂ ದಿನಾಂಕ:27.02.2024ರ ನಂತರ "**https://kppp.karnataka.gov.in**" ವೆಬ್‌ಸೈಟ್‌ನಲ್ಲಿ ಟೆಂಡರ್ ಡಾಕ್ಯೂಮೆಂಟ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಿಡ್‌ನ್ನು ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯ ಟೆಂಡರ್‌ಗೆ ಬಿಡ್ಡನ್ನು ಸಲ್ಲಿಸಲು ಕೊನೆಯ ದಿನಾಂಕ: 05.02.2024 ಎಂದು ಮತ್ತು ಟೆಂಡರ್ ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ: 07.03.2024 ಎಂದು ನಿಗದಿಪಡಿಸಿದೆ. ಇನ್ನಿತರೆ ಹೆಚ್ಚಿನ ಮಾಹಿತಿಯನ್ನು **e-procurement Helpdesk Phone No's: +91-80-46010000, +91-80-68948777** ಅನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ನಿಬಂಧನೆಗೊಳಪಟ್ಟ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು. ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರ ಪಡೆದಿರುವ ಅಧಿಕಾರಿಯು ಎಲ್ಲಾ ಅಥವಾ ಯಾವುದೇ ಟೆಂಡರ್‌ನ್ನು ಕಾರಣ ನೀಡದೆ ತಿರಸ್ಕರಿಸುವ ಅಧಿಕಾರಿವನ್ನು ಹೊಂದಿರುತ್ತಾರೆ.

ಸಹಿ/- ಕಾರ್ಯಪಾಲಕ ಅಭಿಯಂತರರು,
ಸಿಂಗಟಾಲೂರು ಏತ ನೀರಾವರಿ ಯೋಜನೆ, ನಂ. 1 ವಿಭಾಗ,
ಕರ್ನಾಟಕ ನೀರಾವರಿ ನಿಗಮ ನಿಯಮಿತ, ಮುಂಡರಗಿ,
ಗದಗ ಜಿಲ್ಲೆ.

ವಾ.ಸಾ.ಇ./ಗದಗ/583
ದೇಶಪಾಂಡೆಪಬ್ಲಿಸಿಟಿ/2023-24


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka